ಸಂಪುಟ: 06 ಸಂಚಿಕೆ: 176 ಪುಟಗಳು: 08 ಸೋಮವಾರ 07 ಸೆಪ್ಟೆಂಬರ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಬದುಕಿನ ಅತಿ ದೊಡ್ಡ ಸಾಧನೆಯ ಹಿಂದೆ ಅಷ್ಟೇ ದೊಡ್ಡದಾದ ತ್ಯಾಗವೂ ಇರುತ್ತದೆ. ತ್ಯಾಗ, ಪರಿಶ್ರಮವಿಲ್ಲದೆ ಯಾವುದೂ ಸಿದ್ಧಿಸುವುದಿಲ್ಲ.

## ಬೆಂಗಳೂರಿನಲ್ಲಿ ಡ್ರೈ ಫ್ರೂಟ್ಸ್ ಬೆಲೆ ಗಗನಕ್ಕೆ

• ಉದಯವಾಹಿನಿ, ಬೆಂಗಳೂರು

ಇರಾನ್-ಇಸ್ರೇಲ್-ಅಮೆರಿಕ ಯುದ್ಧ ಮುಗಿದು ಸುಮಾರು ಮೂರು ತಿಂಗಳು ಕಳೆದರೂ, ಮಧ್ಯಪ್ರಾಚ್ಯದ ಕೆಲ ದೇಶಗಳ ನೌಕಾ ನೆಲೆಗಳು ಇನ್ನೂ ಸಹಜ ಸ್ಥಿತಿಗೆ ಬಂದಿಲ್ಲ. ಇದರ ಎಫೆಕ್ಟ್ ಇದೀಗ ಬೆಂಗಳೂರಿನ ಡ್ರೈ ಫ್ರೂಟ್ಸ್ ಮಾರುಕಟ್ಟೆ ಮೇಲೂ ಬಿದ್ದಿದೆ. ಡ್ರೈ ಫ್ರೂಟ್ಸ್ ಸಪ್ಲೈ ಕಡಿಮೆಯಾಗಿದ್ದು, ಬೆಲೆಗಳು ಶೇ.30ರಿಂದ 40ರಷ್ಟು ಏರಿಕೆಯಾಗಿದೆ. ಇರಾನ್ ಸೇರಿದಂತೆ ಮಧ್ಯಪ್ರಾಚ್ಯ ದೇಶಗಳಿಂದ ರಾಜ್ಯಕ್ಕೆ ಬರುತ್ತಿದ್ದ ಡ್ರೈ ಫ್ರೂಟ್ಸ್ ಸಪ್ಲೈ ಬಹುತೇಕ ಸ್ಥಗಿತವಾಗಿದೆ. ಕಳೆದ ಮೂರು ತಿಂಗಳಿನಿಂದ ಬೆಂಗಳೂರಿಗೆ ಬರುತ್ತಿದ್ದ ಡ್ರೈ ಫ್ರೂಟ್ಸ್‌ನಲ್ಲಿ ಕೊರತೆ ಎದುರಾಗಿದೆ. ಇರಾನ್ ಸೇರಿದಂತೆ ಮಧ್ಯಪ್ರಾಚ್ಯದ ಹಲವು ದೇಶಗಳು ಡ್ರೈ ಫ್ರೂಟ್ಸ್ ಉತ್ಪಾದನೆಗೆ ಹೆಸರುವಾಸಿಯಾಗಿವೆ. ಆದರೆ, ಸುಮಾರು ಮೂರು ತಿಂಗಳ ಹಿಂದೆ ನಡೆದ ಇರಾನ್-ಇಸ್ರೇಲ್-ಅಮೆರಿಕ ಯುದ್ಧದ ಎಫೆಕ್ಟ್‌ನಿಂದ ಇರಾನ್‌ನ ಬಂದರ್ ಅಬ್ಬಾಸ್ ಸೇರಿದಂತೆ ಹಲವು ನೌಕಾ ನೆಲೆಗಳು ಹಾನಿಗೊಳಗಾಗಿವೆ.

ಇವು ಇನ್ನೂ ಸಂಪೂರ್ಣವಾಗಿ ಸಹಜ ಸ್ಥಿತಿಗೆ ಬಂದಿಲ್ಲ ಎನ್ನಲಾಗುತ್ತಿದೆ. ಹೀಗಾಗಿ ಇರಾನ್, ಸೌದಿ, ಟುನೀಷಿಯಾ ಸೇರಿದಂತೆ ಮಧ್ಯಪ್ರಾಚ್ಯದ ದೇಶಗಳಿಂದ ಬೆಂಗಳೂರಿಗೆ ಆಮದಾಗುತ್ತಿದ್ದ ಬಹುತೇಕ ಡ್ರೈ ಫ್ರೂಟ್ಸ್ ಸಪ್ಲೈ ಸ್ಥಗಿತವಾಗಿದೆ. ಇನ್ನು ಕೆಲ ಸ್ಥಳಗಳಿಂದ ಬರುತ್ತಿದ್ದ ಸಪ್ಲೈ ಪ್ರಮಾಣವೂ ಕಡಿಮೆಯಾಗಿದೆ. ಇದರ ಜೊತೆಗೆ ಡ್ರೈ ಫ್ರೂಟ್ಸ್‌ನ್ನು ಬೆಂಗಳೂರಿಗೆ ತರಲು ಸುತ್ತಿಕೊಂಡು ಬರಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಶಿಪ್ಪಿಂಗ್ ಲೈನ್ ಚಾರ್ಜ್ ಕೂಡ ಡಬಲ್ ಆಗಿದೆ. ಒಂದು ಕಂಟೇನರ್‌ಗೆ ಈ ಹಿಂದೆ 1,500 ಡಾಲರ್ ಇದ್ದ ಚಾರ್ಜ್ ಇದೀಗ 4,000 ಡಾಲರ್‌ಗೆ ಏರಿಕೆಯಾಗಿದೆ.

## ಹೋಟೆಲ್, ಕ್ಲಬ್ ಆಯ್ತು.. ? ಈಗ ಆನ್‌ಲೈನ್ ವೇರ್‌ಹೌಸ್‌ಗಳ ಮೇಲೆ FDA ಅಧಿಕಾರಿಗಳ ದಾಳಿ

• ಉದಯವಾಹಿನಿ, ಬೆಂಗಳೂರು



ಹೋಟೆಲ್ ಆಯ್ತು, ಕ್ಲಬ್ ಆಯ್ತು, ಪಿಜಿ ಆಯ್ತು ಈಗ ಇ-ಕಾಮರ್ಸ್ ಸರದಿ. ಇ-ಕಾಮರ್ಸ್ ವೇರ್‌ಹೌಸ್‌ಗಳ ಮೇಲೆ ಆಹಾರ ಇಲಾಖೆ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಆನೇಕಲ್ ಸೇರಿದಂತೆ ವಿವಿಧ ವೇರ್‌ಹೌಸ್‌ಗಳ ಮೇಲೆ ದಾಳಿ ನಡೆಸಿದ್ದಾರೆ.

ಆನ್‌ಲೈನಲ್ಲಿ ದಿನಸಿ ವಸ್ತುಗಳು, ಪ್ರಾಡಕ್ಟ್‌ಗಳನ್ನು ಬುಕ್ ಮಾಡುವುದಕ್ಕೂ ಮುಂಚೆ ಎಚ್ಚರವಹಿಸುವಂತೆ ಸೂಚಿಸಲಾಗಿದೆ. ಇ-ಕಾಮರ್ಸ್ ವೇರ್‌ಹೌಸ್‌ಗಳ ಮೇಲೆ ದಾಳಿ ಮಾಡಿ ಪರಿಶೀಲನೆ ನಡೆಸಲಾಗಿದೆ. FDA ಅಧಿಕಾರಿಗಳ ದಾಳಿಯಿಂದ ವೇರ್‌ಹೌಸ್‌ಗಳ ಕರ್ಮಕಾಂಡ ಬಯಲಾಗಿದೆ. ದಿನಸಿ ಮತ್ತು ಮನೆಬಳಕೆಯ ಸಾಮಗ್ರಿಗಳ ಒಳಗೊಂಡ ವೇರ್‌ಹೌಸ್‌ಗಳು, ಅಕ್ಕಿ, ಬೇಳೆ, ಎಣ್ಣೆ, ಸೋಪು, ಶಾಂಪೂ, ಡಿಟರ್ಜೆಂಟ್ ಸ್ವಚ್ಛಗೊಳಿಸುವ ಸಾಮಗ್ರಿಗಳ ಗೋದಾಮು, ಪ್ರಾಡಕ್ಟ್‌ಗಳ ಮೇಲೆ ಲೇಬಲಿಂಗ್ ಮತ್ತು ಮ್ಯಾನಿಫ್ಯಾಕ್ಚರಿಂಗ್ ಡೇಟ್ ಇಲ್ಲದೇ ಇರೋದು ಬಯಲಾಗಿದೆ. ವೇರ್‌ಹೌಸ್‌ಗಳಲ್ಲಿ ಸ್ವಚ್ಛತೆ ಇಲ್ಲದೇ ಇರುವುದು ಕೂಡ ಬಟಾ ಬಯಲಾಗಿದೆ. ಆನ್‌ಲೈನ್‌ನಲ್ಲಿ ದಿನಸಿ ಇನ್ನಿತರ ಆಹಾರ ಪದಾರ್ಥಗಳನ್ನ ಆರ್ಡರ್ ಮಾಡೋಕು ಮುಂಚೆ ಹುಷಾರು ಎನ್ನಲಾಗಿದೆ. ಆಹಾರ ಸುರಕ್ಷತಾ ನಿಯಮಗಳು ಉಲ್ಲಂಘನೆ ಮಾಡಿರುವ ವೇರ್‌ಹೌಸ್‌ಗಳಿಗೆ ನೋಟಿಸ್ ನೀಡಲು ಆಹಾರ ಸುರಕ್ಷತಾ ಇಲಾಖೆ ಅಧಿಕಾರಿಗಳು ಸಿದ್ಧತೆ ನಡೆಸಿದ್ದಾರೆ.

## ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಅಶೋಕ್ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ಬಸ್‌ನ ಹೆಡ್‌ಲೈಟ್ ಕೆಟ್ಟ ಪರಿಣಾಂ ಧಾರವಾಡ ಜಿಲ್ಲೆಯ ಕುಂದಗೋಳದಲ್ಲಿ ಪ್ರಯಾಣಿಕರ ಮೊಬೈಲ್ ಟಾರ್ಚ್ ಬೆಳಕಿನ ಸಹಾಯದಿಂದ ಚಾಲಕ ಸುಮಾರು 15 ಕಿ.ಮೀ. ದೂರ ಬಸ್ ಚಲಾಯಿಸಿರುವ ಘಟನೆ ಸಂಬಂಧ ರಾಜ್ಯ ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಆರ್. ಅಶೋಕ್ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಈ ಕುರಿತು ಎಕ್ಸ್ ಪೋಸ್ಟ್ ಮಾಡಿರುವ ಅವರು, ಕಲಬುರಗಿಯಿಂದ ಚಿಂಚೋಳಿಗೆ ಪ್ರಯಾಣಿಸುತ್ತಿದ್ದ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ಬಸ್‌ನ ಹೆಡ್ ಲೈಟ್ ಕೆಟ್ಟುಹೋಗಿ, ಮೊಬೈಲ್ ಫೋನ್ ಟಾರ್ಚ್ ಬೆಳಕಿನಲ್ಲಿ ಚಾಲಕ ಬಸ್ ಚಲಾಯಿಸುವ ಪರಿಸ್ಥಿತಿ ಬಂದೊದಗಿತ್ತು. ಈ ಘಟನೆ ಮಾಸುವ ಮುನ್ನವೇ ಧಾರವಾಡ ಜಿಲ್ಲೆಯ ಕುಂದಗೋಳದಲ್ಲೂ ವಾಯುವ್ಯ ಕರ್ನಾಟಕ ಸಾರಿಗೆ ಸಂಸ್ಥೆಯ ಬಸ್‌ನ ಹೆಡ್‌ಲೈಟ್ ಕೈಕೊಟ್ಟು, ಕತ್ತಲಿನಲ್ಲಿ ಮೊಬೈಲ್ ಟಾರ್ಚ್ ಆಸರೆಯಲ್ಲೇ ಚಾಲಕ ಪ್ರಯಾಣಿಕರನ್ನು ತಲುಪಿಸಬೇಕಾಯಿತು.

ಪ್ರಯಾಣಿಕರ ಜೀವವನ್ನು ಪಣಕ್ಕಿಟ್ಟು ಬಸ್ಸುಗಳನ್ನು ರಸ್ತೆಗೆ ಇಳಿಸುತ್ತಿರುವ ಈ ನಾಲಾಯಕ್ ಕಾಂಗ್ರೆಸ್ ಸರ್ಕಾರಕ್ಕೆ ಜನಸಾಮಾನ್ಯರ ಭದ್ರತೆಯ ಬಗ್ಗೆ ಕನಿಷ್ಠ ಕಾಳಜಿಯಾದರೂ ಇದೆಯೇ ಎಂದವರು ಪ್ರಶ್ನಿಸಿದ್ದಾರೆ.

## ಬೆಂಗಳೂರಿನಲ್ಲಿ ಗಣೇಶ ಹಬ್ಬಕ್ಕೆ ಪೊಲೀಸರು ಕಠಿಣ ರೂಲ್ಸ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಗಣೇಶ ಹಬ್ಬಕ್ಕೆ ಪೊಲೀಸರು ಕಠಿಣ ರೂಲ್ಸ್ ಜಾರಿಗೆ ತಂದಿದ್ದು, ಈ ಬಗ್ಗೆ ಬೆಂಗಳೂರು ನಗರ ಪೊಲೀಸ್ ಆಯುಕ್ತರು ಸೀಮಂತ್ ಕುಮಾರ್ ಸಿಂಗ್ ಮಹತ್ವದ ಮಾಹಿತಿ ಹಂಚಿಕೊಂಡಿದ್ದಾರೆ. ಗಣೇಶೋತ್ಸವ ಆಚರಣೆಯ ಜವಾಬ್ದಾರಿ ಆಯೋಜಕರದ್ದಾಗಿದ್ದು, ಪೊಲೀಸರು ಮತ್ತು ಜಿಬಿಎ ನಿಯಾಮವಳಿ ಮೀರದಂತೆ ಸೂಚನೆ ನೀಡಲಾಗಿದೆ. ಗಣೇಶೋತ್ಸವಕ್ಕೆ ಬೇರೆ ಇಲಾಖೆಗಳ ಅನುಮತಿ ಕಡ್ಡಾಯವಾಗಿದ್ದು, ಅನುಮತಿ ಪಡೆದಿದ್ದರೆ ಮಾತ್ರ ಗಣೇಶ ಕೂರಿಸಲು ಅವಕಾಶ ಇರಲಿದೆ. ಇದರ ಜೊತೆಗೆ ಸುಪ್ರೀಂಕೋರ್ಟ್ ಆದೇಶಗಳನ್ನ ಉಲ್ಲಂಘಿಸುವಂತಿಲ್ಲ. ಟೈಮಿಂಗ್ಸ್ ಪ್ರಕಾರ ನಿಗದಿಪಡಿಸಿದ ರೂಟ್‌ನಲ್ಲೇ ಮೆರವಣಿಗೆ ನಡೆಯಬೇಕು. ವಿಶೇಷವಾಗಿ ಸ್ವಯಂಸೇವಕರ ಪಟ್ಟಿ ಪೊಲೀಸರಿಗೆ ಕೊಡ್ಬೇಕು. ಮೆರವಣಿಗೆ ಮಾರ್ಗ ಮತ್ತು ಗಣೇಶ ವಿಸರ್ಜನೆ ಸ್ಥಳಗಳಲ್ಲಿ ಜಿಬಿಎ ,ಸ್ಥಳೀಯ ಆಯಾ ಡಿಸಿಪಿಗಳಿಂದ ಪರಿಶೀಲನೆ ನಡೆಯಲಿದೆ.

ನನಗೆ ವಯಸ್ಸಾಯ್ತು ಅಂತ ಚುನಾವಣೆಗೆ ನಿಲ್ಲಲ್ಲ ಎಂದಿಲ್ಲ. ಆದ್ರೆ ಚುನಾವಣಾ ವ್ಯವಸ್ಥೆ ಹದಗೆಟ್ಟಿದ್ದು, ಹೀಗಾಗಿ ನಿವೃತ್ತಿ ಬಯಸಿದೆ. ಆದ್ರೆ ಸಮಾಜದಲ್ಲಿ ಜಾತಿ ವ್ಯವಸ್ಥೆ ತೊಲಗುವವರೆಗೆ ನಿಮ್ಮ ಜೊತೆ ಇರ್ತೀನಿ. ಹೋರಾಟ ಮಾಡ್ತೇನೆ, ನೀವ್ಯಾರು ಆತಂಕ ಪಡಬೇಕಿಲ್ಲ ಎಂದು ಸಿದ್ದರಾಮಯ್ಯ ಭರವಸೆ ನೀಡಿದ್ರು. ಇಲ್ಲಿರುವ ಸಚಿವರು, ನಮ್ಮ ಪಕ್ಷ ಹಾಗೂ ಸಿಎಂ ನನ್ನ ಮಾತು ಕೇಳ್ತಾರೆ ಎನ್ನುವ ನಂಬಿಕೆ ಇದೆ. ನಿಮಗೆಲ್ಲಾ ನ್ಯಾಯ ಸಿಗಬೇಕು. ಕನಿಷ್ಠ ಮೀಸಲಾತಿ 75% ಸಿಗಲೇಬೇಕು. ಜಾತಿ ಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಸಿಕ್ಕಾಗ ಮಾತ್ರ ಸಮಸಮಾಜ ನಿರ್ಮಾಣ ಮಾಡೋದಕ್ಕೆ ಸಾಧ್ಯವಾಗುತ್ತೆ. ಲೋಕಸಭೆ, ವಿಧಾನ ಸಭೆಯಲ್ಲಿ ಮೀಸಲಾತಿ ಸಿಕ್ಕಾಗ ಮಾತ್ರ ರಾಜಕೀಯ ಪ್ರಾತಿನಿಧ್ಯ ಸಿಗಲು ಸಾಧ್ಯ ಎಂದಿದ್ದಾರೆ. ಜಾತಿ ಸಮೀಕ್ಷೆ ಬಗ್ಗೆ ಮಾತಾಡಿದ ಸಿದ್ದರಾಮಯ್ಯ ಅವರು, ನ್ಯಾಯಾಲಯಗಳ ಸರಿಯಾದ ರೀತಿಯಲ್ಲಿ ಸಮೀಕ್ಷೆ ಆಗಿಲ್ಲ. ನಿಖರ ಅಂಕಿಅಂಶಗಳ ಇಲ್ಲ ಅಂತ ಅನೇಕ ಮೊಕದ್ದಮೆಗಳಲ್ಲಿ ಸುಪ್ರೀಂಕೋರ್ಟ್ ಹೇಳಿದೆ. ಅದಕ್ಕಾಗಿ ನಾನು 2013ರಲ್ಲಿ ಸಿಎಂ ಆಗಿದ್ದಾಗ ಕಾಂತರಾಜು ಅಧ್ಯಕ್ಷತೆಯಲ್ಲಿ ಸಮೀಕ್ಷೆ ಮಾಡಿ ಅಂದೆ. ಆದ್ರೆ ನನ್ನ ಅವಧಿಯಲ್ಲಿ ವರದಿ ಸಿದ್ದವಾಗಿಲ್ಲ. ಚುನಾವಣೆಯಲ್ಲಿ ನಮ್ಮ ಪಕ್ಷ ಸೋತು ಬಳಿಕ ಸಮ್ಮಿಶ್ರ ಸರ್ಕಾರದಲ್ಲಿ ಕುಮಾರಸ್ವಾಮಿ ಸಿಎಂ ಆಗಿದ್ರು. ವರದಿ ತೆಗೆದುಕೊಳ್ಳುತ್ತಿದ್ದೇನೆ ಅಂದ್ರು ಅದಕ್ಕೆ ಕುಮಾರಸ್ವಾಮಿ ಅವ್ರು ತೆಗೆದುಕೊಳ್ಳಬಾರದು ಅಂದ್ರು.

# ಸಿದ್ದು ಅಬ್ಬರ... ಏನಿದು ಲೆಕ್ಕಾಚಾರ..?

• ಉದಯವಾಹಿನಿ, ಬೆಂಗಳೂರು

**ಅಹಿಂದ ಸಮಾವೇಶದಲ್ಲಿ ಮಾಜಿ ಸಿಎಂ**

ಜಾತಿ ಸಮೀಕ್ಷೆ ವರದಿ ಶಿಫಾರಸುಗಳನ್ನು ಜಾರಿಗೊಳಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮಾಜಿ ಸಿಎಂ ಸಿದ್ದರಾಮಯ್ಯ ಮನವಿ ಮಾಡಿದ್ದಾರೆ. ಭಾನುವಾರ ಅರಮನೆ ಮೈದಾನದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟವು ಆಯೋಜಿಸಿದ್ದ, ರಜತ ಮಹೋತ್ಸವ ಹಾಗೂ ಹಿಂದುಳಿದ ಜಾತಿಗಳ ಬೃಹತ್ ಜನ ಜಾಗೃತಿ ಸಮಾವೇಶ ಮತ್ತು ಅಭಿನಂದನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ನಾನು 1996ರಲ್ಲಿ ಡಿಸಿಎಂ ಆಗಿದ್ದಾಗ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ಆಗಬೇಕು ಎಂಬ ಕನಸು ಕಂಡಿದ್ದೆ. ನ್ಯಾಯಾಲಯಗಳು ಸರಿಯಾದ ರೀತಿ ಸಮೀಕ್ಷೆ ಆಗಿಲ್ಲ, ನಿಖರವಾದ ಅಂಕಿ ಅಂಶ ಇಲ್ಲ ಅಂತ ಅನೇಕ ಬಾರಿ ಹೇಳಿವೆ. ಅದಕ್ಕಾಗಿ ನಾನು 2013ರಲ್ಲಿ ಸಿಎಂ ಆಗಿದ್ದಾಗ ಜಾತಿ ಸಮೀಕ್ಷೆ ಮಾಡಲು ಸೂಚನೆ ನೀಡಿದ್ದೆ. ಆದರೆ ನನ್ನ ಅವಧಿಯಲ್ಲಿ ವರದಿ ತಯಾರಾಗಲಿಲ್ಲ. ಚುನಾವಣೆ ಬಂದ ಬಳಿಕ ನಮ್ಮ ಪಕ್ಷ ಸೋತಿತು. ಆಮೇಲೆ ವರದಿ ಕೊಟ್ಟರು. ಬಳಿಕ ಕುಮಾರಸ್ವಾಮಿ ಸಿಎಂ ಆಗಿದ್ದರು. ಆದರೆ ವರದಿ ಸ್ವೀಕಾರ ಮಾಡಲು ಕುಮಾರಸ್ವಾಮಿ ಒಪ್ಪಲಿಲ್ಲ ಎಂದರು. ನಾನು ಸಕ್ರಿಯ ರಾಜಕಾರಣದಲ್ಲಿ ಇರುತ್ತೇನೆ. ಆದರೆ ಚುನಾವಣಾ ರಾಜಕೀಯದಿಂದ ನಿವೃತ್ತಿ ಹೊಂದುತ್ತೇನೆ. ನನಗೆ ವಯಸ್ಸಾಯ್ತು ಅಂತಾ ಸ್ಪರ್ಧಿಸಲ್ಲ ಅಂತಾ ಹೇಳುತ್ತಿಲ್ಲ. ಚುನಾವಣಾ ವ್ಯವಸ್ಥೆ ಈಗ ಬಹಳ ದುಬಾರಿ ಆಗ್ತಾ ಇದೆ. ನಮ್ಮ ಚುನಾವಣಾ ವ್ಯವಸ್ಥೆ ಸುಧಾರಣೆ ಆಗಬೇಕು. ನಮ್ಮಗೆ ಸಮಾನ ಅವಕಾಶಗಳು ಸಿಗುವವರೆಗೆ ಹಾಗೂ ಜಾತಿ ವ್ಯವಸ್ಥೆ ಹೋಗುವವರೆಗೆ ನಿಮ್ಮ ಜೊತೆಗಿದ್ದು ಹೋರಾಟ ಮಾಡುತ್ತೇನೆ, ಹೀಗಾಗಿ ನೀವ್ಯಾರೂ ಆತಂಕ ಪಡಬೇಕಾಗಿಲ್ಲ ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಹೇಳಿದರು. ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಒಕ್ಕೂಟದ ರಜತ ಮಹೋತ್ಸವ ಸಂಭ್ರಮದಲ್ಲಿ ಭಾಗವಹಿಸಿ ಮಾತನಾಡಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಿಂದುಳಿದ ಜಾತಿಯವನೆಂದು ಹೇಳಿಕೊಳ್ಳಲು ಯಾವುದೇ ಮುಜುಗರವಿಲ್ಲ. ನಮ್ಮ ದೇಶದಲ್ಲಿದ್ದ ಶ್ರೇಣಿಕೃತ ಚಾತುರ್ವರ್ಣ ವ್ಯವಸ್ಥೆಯಲ್ಲಿ ನಾನು ಶೂದ್ರ ಜಾತಿಗೆ ಸೇರಿದವನು. ಲಿಂಗಾಯತರು, ಒಕ್ಕಲಿಗರು ಸೇರಿದಂತೆ ನಾವೆಲ್ಲರೂ ಶೂದ್ರರೇ ಆಗಿದ್ದೇವೆ' ಎಂದರು. 'ಅಂದು ಬ್ರಾಹ್ಮಣ, ಕ್ಷತ್ರಿಯ ಹಾಗೂ ವೈಶ್ಯರಿಗೆ ಮಾತ್ರ ವಿದ್ಯಾಭ್ಯಾಸದ ಅವಕಾಶವಿತ್ತು. ಶೂದ್ರರು ದಡ್ಡರೆಂದಲ್ಲ, ಬದಲಿಗೆ ಅವರಿಗೆ ಓದುವ ಅವಕಾಶಗಳೇ ಇರಲಿಲ್ಲ. ಅಂದೇ ಸಮಾನ ಅವಕಾಶಗಳನ್ನು ನೀಡಿದ್ದರೆ ಸಮಾಜದಲ್ಲಿ ಈ ಮಟ್ಟದ ಅಸಮಾನತೆ ಸೃಷ್ಟಿಯಾಗುತ್ತಿರಲಿಲ್ಲ' ಎಂದು ಹೇಳಿದರು.

**1** ಮುಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ಘೋಷಣೆ ಕೂಗಿದ ಶಾಸಕ ಪ್ರದೀಪ್ ಈಶ್ವರ್.

**2** ಕಾಂಗ್ರೆಸ್ ಶಾಸಕರ ಈ ಹೇಳಿಕೆಯು ರಾಜಕೀಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

**3** ಹಿಂದುಳಿದ ಜಾತಿಗಳ ಬೃಹತ್ ಜನ ಜಾಗೃತಿ ಸಮಾವೇಶದ ವೇದಿಕೆಯಲ್ಲಿ ಘೋಷಣೆ ಕೂಗಿದ ಶಾಸಕ.

### ಚುನಾವಣೆಗೆ ನಿಲ್ಲೋದಿಲ್ಲ, ಜಾತಿ ವ್ಯವಸ್ಥೆ ಹೋಗೋವರೆಗೆ ಹೋರಾಟ





ಮುಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದ ಈಶ್ವರ್!

ಹಿಂದುಳಿದ ವರ್ಗದ ಸಮುದಾಯಗಳಿಗೆ ನ್ಯಾಯ ಸಿಗಬೇಕು. ಹಿಂದುಳಿದ ಸಮುದಾಯಗಳ ಮಕ್ಕಳು ಇಂಜಿನಿಯರ್ಸ್, ಡಾಕ್ಟರ್ಸ್, ವಿಶ್ವವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರಾಗಬೇಕು. ಸಂಘಟನೆಯ ಹೋರಾಟದ ಕೆಲಸ ನಿಮ್ಮಿಂದ ಮಾತ್ರ ಸಾಧ್ಯ. ಸಿದ್ದರಾಮಯ್ಯ ಅವರಿಗಿಂತ ವಿಭಿನ್ನವಾದ ನಾಯಕ ನಮಗೆ ಸಿಗಲು ಸಾಧ್ಯವಿಲ್ಲ. ಅವರ ನೇತೃತ್ವದಲ್ಲಿ ನಾವೆಲ್ಲ ಹೋರಾಟ ಮಾಡೋಣ.

### ಎದೆಯಲ್ಲಿ ಸಿದ್ದರಾಮಯ್ಯನವರೂ ಇದ್ದಾರೆ

ನನ್ನ ಎದೆಯಲ್ಲಿ ರಾಮನೂ ಇದ್ದಾನೆ, ಸಿದ್ದರಾಮಯ್ಯನವರೂ ಇದ್ದಾರೆ. ಸಿದ್ದರಾಮಯ್ಯ ಕೇವಲ ಕುರುಬರ ನಾಯಕರಷ್ಟೇ ಅಲ್ಲ, ಅವರು ಇಡೀ ಅಹಿಂದ ನಾಯಕ. ಅಂದು ಅವರನ್ನು ಕುರಿ ಕಾಯುವವನು' ಅಂತ ಟೀಕೆ ಮಾಡಿದ್ದರು. ಆದರೆ ಅದೇ ಸಿದ್ದರಾಮಯ್ಯನವರು ಇಂದು ದಾಖಲೆಯ ಬಜೆಟ್ ಮಂಡಿಸಿದ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ ಕಾಂಗ್ರೆಸ್ ಸರ್ಕಾರದ ಅಧಿಕಾರಕ್ಕೆ ಬಂದ ಮೂರೂವರೆ ವರ್ಷಗಳ ಸಿಎಂ ಆಗಿ ಸಿದ್ದರಾಮಯ್ಯ ಅಧಿಕಾರಿ ನಡೆಸಿದರು. ಆ ಬಳಿಕ ಹೈಕಮಾಂಡ್ ಆದೇಶದಿಂದ ಡಿಕೆ ಶಿವಕುಮಾರ್ ಸಿಎಂ ಆಗಿದ್ದಾರೆ. ಹೈಕಮಾಂಡ್ ಬಲವಂತವಾಗಿ ಸಿದ್ದರಾಮಯ್ಯ ಅವರಿಂದ ಸಿಎಂ ಕುರ್ಚಿಯಿಂದ ಇಳಿಸಿತು ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಇಂದಿಗೂ ಹರಿದಾಡುತ್ತಿವೆ.

ಸಿದ್ದರಾಮಯ್ಯನವರು ಮುಂದೇನು ಮಾಡುತ್ತಾರೆ ಎಂಬ ಕುತೂಹಲ ಹಲವರಲ್ಲಿದ್ದು, ಮತ್ತೆ ಅವರು ಸಿಎಂ ಆಗಬೇಕು ಎಂಬ ಆಸೆ ಅವರ ಅಭಿಮಾನಿಗಳಲ್ಲಿದೆ.



### ಧ್ವನಿ ಇಲ್ಲದ ಸಮುದಾಯಗಳಿಗೆ ಸಿದ್ದರಾಮಯ್ಯ ಶಕ್ತಿ

ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಮಾತನಾಡಿ, ಸಿದ್ದರಾಮಯ್ಯ ಅವರು ರಾಜ್ಯ ರಾಜಕೀಯದಲ್ಲಿ ಹೊಸ ಚಿಂತನೆಯನ್ನು ಹುಟ್ಟು ಹಾಕಿದ ನಾಯಕ. ಅಹಿಂದ ಹೋರಾಟದ ಮೂಲಕ ನಿರ್ಲಕ್ಷ್ಯಕ್ಕೆ ಒಳಗಾಗಿದ್ದ ಜಾತಿಗಳಿಗೆ, ಧ್ವನಿ ಇಲ್ಲದ ಸಮುದಾಯಗಳಿಗೆ ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಶಕ್ತಿ ತುಂಬುವ ಕೆಲಸ ಮಾಡಿದ್ದಾರೆ ಎಂದು ಅವರು ಹೇಳಿದರು. ಕಳೆದ 25 ವರ್ಷಗಳಿಂದ ಹಿಂದುಳಿದ ಸಮುದಾಯಗಳಿಗೆ ಧ್ವನಿ ನೀಡುವಂತ, ಹೋರಾಟಕ್ಕೆ ಶಕ್ತಿ, ಸರ್ಕಾರದಲ್ಲಿ ಸಿಗಬೇಕಾದ ಸವಲತ್ತುಗಳು ಮತ್ತು ಅಧಿಕಾರಕ್ಕಾಗಿ ಒಕ್ಕೂಟವು ಕೆಲಸ ಮಾಡಿಕೊಂಡು ಬಂದಿದೆ ಎಂದರು. ಸಿದ್ದರಾಮಯ್ಯನವರಿಗೆ ಮಾತ್ರವಲ್ಲದೆ, ಅಹಿಂದ ಹೋರಾಟ ಬಹಳ ಯಶಸ್ವಿಯಾಗಿ ಕೆಲಸ ಮಾಡಿದೆ.

ಸಿದ್ದರಾಮಯ್ಯ ರಾಜ್ಯ ಕಂಡ ಅಪರೂಪದ ರಾಜಕಾರಣಿ. ಬಸವಣ್ಣನವರ ತತ್ವ ಸಿದ್ಧಾಂತಗಳನ್ನು ಅನುಕರಿಸಿ, ಬಿ.ಆರ್.ಅಂಬೇಡ್ಕರ್ ಅವರ ಆಶಯಗಳನ್ನು ಮೈಗೂಡಿಸಿಕೊಂಡು ಕೆಲಸ ಮಾಡಿದ್ದಾರೆ ಎಂದು ಹೇಳಿದರು.

### ಚರ್ಚೆಗೆ ಗ್ರಾಸವಾದ ಶಾಸಕರ ಹೇಳಿಕೆ


ರಾಜ್ಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿರುವ ಜಾತಿಗಣತಿ ವಿಚಾರ ಪ್ರಸ್ತಾಪಿಸಿದ ಸಿದ್ದರಾಮಯ್ಯ, 'ಹಿಂದುಳಿದ ವರ್ಗಗಳ ಆಯೋಗದ ವರದಿಯನ್ನು ಈಗಾಗಲೇ ಸ್ವೀಕರಿಸಿದ್ದೇನೆ. ಆದರೆ ವರದಿ ಬಹಿರಂಗ ಮಾಡಬಾರದೆಂದು ಕೋರ್ಟ್ ಆದೇಶವಿದೆ. ಈ ತಡೆಯಾಜ್ಞೆಯನ್ನು ತೆರವುಗೊಳಿಸಲು ಕಾನೂನು ಹೋರಾಟ ನಡೆಸುವಂತೆ ಸೂಚನೆ ನೀಡಲಾಗಿದೆ. ಮಧುಸೂದನ್ ಆರ್. ನಾಯ್ಕ್ ವರದಿ ರಾಜ್ಯದಲ್ಲಿ ಕಡ್ಡಾಯವಾಗಿ ಜಾರಿಯಾಗಲೇಬೇಕು' ಎಂದು ಒತ್ತಾಯಿಸಿದರು. 'ನಮ್ಮ ಪಕ್ಷ ಹಾಗೂ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ನನ್ನ ಮಾತನ್ನು ಕೇಳುತ್ತಾರೆ ಎಂಬ ಸಂಪೂರ್ಣ ವಿಶ್ವಾಸ ನನಗಿದೆ. ಜಾತಿಗಣತಿ ಜಾರಿಯಾದರೆ ದಲಿತರು ಮತ್ತು ಹಿಂದುಳಿದ ವರ್ಗದವರಿಗೆ ಕನಿಷ್ಠ ಶೇಕಡಾ 75ರಷ್ಟು ಮೀಸಲಾತಿ ಸಿಗಲೇಬೇಕು. ಜೊತೆಗೆ ಜಾತಿವಾರು ಜನಸಂಖ್ಯೆಗೆ ಅನುಗುಣವಾಗಿ ಲೋಕಸಭೆ ಹಾಗೂ ವಿಧಾನಸಭೆಗಳಲ್ಲಿ ಸಮರ್ಪಕ ಮೀಸಲಾತಿ ದೊರೆತಾಗ ಮಾತ್ರ ಎಲ್ಲರಿಗೂ ನ್ಯಾಯಯುತ ರಾಜಕೀಯ ಪ್ರಾತಿನಿಧ್ಯ ಸಿಗಲು ಸಾಧ್ಯ' ಎಂದು ಸಿದ್ದರಾಮಯ್ಯ ಹೇಳಿದ್ದಾರೆ. ಸಚಿವ ಮಧು ಬಂಗಾರಪ್ಪ, ಅಜಯ್ ಸಿಂಗ್, ಶಾಸಕ ಬಿಬಿ ಚಿಮ್ಮನಕಟ್ಟಿ, ಉಮೇಶ್ ಮೇಟಿ, ಬಸವರಾಜ ಶಿವಣ್ಣನವರ್, ಎಂಎಲ್ಸಿ ಗಾಯತ್ರಿ ಶಾಂತೇಗೌಡ, ನಾಗರಾಜ್ ಯಾದವ್ ಭಾಗಿಯಾಗಿದ್ದರು

ಸಚಿವ ಸಂತೋಷ್ ಲಾಡ್ ಮಾತನಾಡಿ, ಹಿಂದುಳಿದ ವರ್ಗಗಳ ಹೋರಾಟ ಪ್ರಾರಂಭ ಆಗಿ 25 ವರ್ಷವಾಗಿದೆ. ತಮಿಳುನಾಡಿನಲ್ಲಿ ಶೇಕಡಾ 65 ಮೀಸಲಾತಿ ಇದೆ. ಇಡೀ ಭಾರತದಲ್ಲಿ ಶೇಕಡಾ 45-50 ಹಿಂದುಳಿದ ವರ್ಗಗಳ ಜನಸಂಖ್ಯೆ ಇದೆ.

ಎಲ್ಲರಿಗೂ ಸಮಪಾಲು ಸಮ ಬಾಳು ಆಗಬೇಕು. ವಿಧಾನಸಭೆ ಮತ್ತು ಲೋಕಸಭೆಯಲ್ಲೂ ಒಬಿಸಿಗೆ ಮೀಸಲಾತಿ ನೀಡಬೇಕು.

**ಸಿದ್ದರಾಮಯ್ಯ ಆಯಸ್ಸು, ಆರೋಗ್ಯ ಹೆಚ್ಚಾಗಲಿ**

ಒಬಿಸಿ ಕಾಲಂ ಅನ್ನು ಕೇಂದ್ರ ಸರ್ಕಾರ ಗಣತಿಯಿಂದ ತೆಗೆದುಬಿಟ್ಟಿದೆ. 60 ಕೋಟಿಗೂ ಹೆಚ್ಚು ಜನಸಂಖ್ಯೆ ಒಬಿಸಿ ವರ್ಗದವರು ದೇಶದಲ್ಲಿದ್ದಾರೆ. ಸಿದ್ದರಾಮಯ್ಯ ಆಯಸ್ಸು, ಆರೋಗ್ಯ ಹೆಚ್ಚಾಗಲಿ ಎಂದು ಹೇಳಿದರು. ಇನ್ನು, ಸಮಾವೇಶದಲ್ಲಿ ಸಿದ್ದರಾಮಯ್ಯ ಅವರ ಎದುರೇ, ಮುಂದಿನ ಚುನಾವಣೆಯಲ್ಲಿ ಸಿದ್ದರಾಮಯ್ಯ ಸ್ಪರ್ಧೆ ಮಾಡಬೇಕು ಎಂದು ಆಗ್ರಹಿಸುವ ಬ್ಯಾನರ್ ಪ್ರದರ್ಶನ ಮಾಡಿ ಬೆಂಬಲಿಗರು ಆಗ್ರಹಿಸಿದರು.



## ಮತದಾರರ ಕರಡು ಪಟ್ಟಿಯಲ್ಲಿ ಹೆಸರಿದ್ರೂ ಬರಲಿದೆ ನೋಟಿಸ್!

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯಡಿ ಮತದಾರರ ಕರಡು ಪಟ್ಟಿಯನ್ನು ಆಗಸ್ಟ್ 24 ರಂದು ಪ್ರಕಟಿಸಲಾಗಿದೆ. ಆದರೆ, ಕರಡು ಮತದಾರರ ಪಟ್ಟಿಯಲ್ಲಿ ನಿಮ್ಮ ಹೆಸರು ಕಂಡುಬಂದರೂ ಸಹ ಚುನಾವಣಾ ನೋಂದಣಾಧಿಕಾರಿಗಳಿಂದ ನಿಮಗೆ ನೋಟಿಸ್ ಬರುವ ಸಾಧ್ಯತೆಯಿದೆ ಎಂದು ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ.

ಕರಡು ಪಟ್ಟಿಯಲ್ಲಿ ಹೆಸರಿದ್ದರೂ, ಹಳೆಯ ದತ್ತಾಂಶದೊಂದಿಗೆ ಸರಿಯಾಗಿ ಮ್ಯಾಪಿಂಗ್ ಆಗದಿರುವ ಪ್ರಕರಣಗಳು ಅಥವಾ ದಾಖಲೆಗಳಲ್ಲಿ ತಾಂತ್ರಿಕ ವ್ಯತ್ಯಾಸಗಳು ಕಂಡುಬಂದಲ್ಲಿ ಸಂಬಂಧಪಟ್ಟ ಮತದಾರರಿಗೆ ನೋಟಿಸ್ ನೀಡುತ್ತಿದ್ದಾರೆ.

ರಾಜ್ಯದಲ್ಲಿ ಕರಡು ಪಟ್ಟಿಗೆ ಸೇರಿದ ಸುಮಾರು 43.8 ಲಕ್ಷ ಮತದಾರರ ದಾಖಲೆಗಳಲ್ಲಿ ಮ್ಯಾಪಿಂಗ್ ಕೊರತೆ ಮತ್ತು ವ್ಯತ್ಯಾಸಗಳು' ಗುರುತಿಸಲಾಗಿದ್ದು, ಇವರಿಗೆ ವಿಚಾರಣೆಗೆ ಹಾಜರಾಗ ುವಂತೆ ನೋಟಿಸ್ ಕಳುಹಿಸಲಾಗುತ್ತಿದೆ.

ಬಿಎಲ್‌ಒ ಮನೆ-ಮನೆಗೆ ತೆರಳಿ ಈ ನೋಟಿಸ್ ತಲುಪಿಸಲಿದ್ದಾರೆ. ನೋಟಿಸ್‌ನಲ್ಲಿ ನೀಡಲಾದ ದಿನಾಂಕ ಹಾಗೂ ಸ್ಥಳದಲ್ಲಿ ಮುಂದೆ ಅಗತ್ಯ ದಾಖಲೆಗಳೊಂದಿಗೆ ಮತದಾರರು ಖುದ್ದಾಗಿ ಹಾಜರಾಗಬೇಕು (ಆನ್‌ಲೈನ್‌ನಲ್ಲಿ ದಾಖಲೆ ಅಪ್‌ಲೋಡ್ ಮಾಡಿದರೂ ಹಾಜರಿ ಕಡ್ಡಾಯ).

ರಾಜ್ಯದಲ್ಲಿ ಕರಡು ಪಟ್ಟಿಗೆ ಸೇರಿದ ಸುಮಾರು ಸೆಪ್ಟೆಂಬರ್ 23ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶವಿದೆ. ಕರಡು ಪಟ್ಟಿಯಲ್ಲಿ ಹೆಸರಿರುವುದು ಅಂತಿಮವಲ್ಲ. ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 27, 2026 ರಂದು ಪ್ರಕಟಿಸಲಾಗುವುದು.

## ದಸರಾ ಗಜಪಡೆಗೆ ಭಾರ ಹೊರುವ ತಾಲೀಮು ಆರಂಭ

• ಉದಯವಾಹಿನಿ, ಬೆಂಗಳೂರು

ವಿಶ್ವವಿಖ್ಯಾತ ಮೈಸೂರು ದಸರಾದ ಜಂಬೂಸವಾರಿ ಆಕರ್ಷಣೆಯಾದ ಗಜಪಡೆಗೆ ಭಾರ ಹೊರುವ ತಾಲೀಮು ಆರಂಭವಾಗಿದೆ. ಅರಮನೆ ಆವರಣದಲ್ಲಿ ಬೀಡುಬಿಟ್ಟಿರುವ ಗಜಪಡೆಗೆ ಬೆಳಿಗ್ಗೆ, ತಾಲೀಮು ನಡೆಸಲಾಗುತ್ತಿದ್ದು, ಇದೀಗ ಹಂತ ಹಂತವಾಗಿ ಭಾರ ಹೊರುವ ತರಬೇತಿ ನೀಡಲಾಗುತ್ತಿದೆ. ಮರಳಿನ ಮೂಟೆಗಳನ್ನು ಹೊರಿಸುವ ತಾಲೀಮು ನಡೆಯಲಿದೆ.

ಬಳಿಕ ಮರದ ಅಂಬಾರಿ ಕಟ್ಟಿಕೊಂಡು ತಾಲೀಮು ನಡೆಸಲಾಗುತ್ತದೆ. ತಾಲೀಮು ವೇಳೆ ಮೂರು ಆನೆಗಳ ಮೇಲೆ ಅರಣ್ಯಾಧಿಕಾರಿಗಳು ವಿಶೇಷ ನಿಗಾ ವಹಿಸಿದ್ದು, ಅಂಬಾರಿ ಹೊರುವ ಆನೆ ಯಾವುದು ಎಂಬುದನ್ನು ಅಂತಿಮವಾಗಿ ನಿರ್ಧರಿಸಲಾಗುತ್ತದೆ. ಜಂಬೂಸವಾರಿಯಲ್ಲಿ ಪಾಲ್ಗೊಳ್ಳುವ ಆನೆಗಳ ಆರೋಗ್ಯ ದೇಹದಾಢ್ಯತೆ ಕಾಪಾಡುವ ಉದ್ದೇಶದಿಂದ ವಿಶೇಷ ಪೌಷ್ಟಿಕ ಆಹಾರ ನೀಡುವ ಕಾರ್ಯ ಆರಂಭವಾಗಿದೆ. ಏಕಲವ್ಯ ಆನೆಗೆ ವಿಶೇಷ ಹಬ್ಬದೂಟ ನೀಡುವ ಮೂಲಕ ಇತರೆ ಆನೆಗಳಿಗೂ ಪೌಷ್ಟಿಕ ಆಹಾರ ನೀಡುವ ಕಾರ್ಯಕ್ಕೆ ಚಾಲನೆ ನೀಡಲಾಯಿತು. ಬೇಯಿಸಿದ ಹೆಸರುಕಾಳು, ಉದ್ದಿನಕಾಳು, ಗೋಧಿ, ಕುಸಲಕ್ಕಿ ಜತೆಗೆ ಈರುಳ್ಳಿ, ಮೂಲಂಗಿ, ಸೌತೆಕಾಯಿ, ಕ್ಯಾರೆಟ್ ಸೇರಿದಂತೆ ವಿವಿಧ ತರಕಾರಿಗಳನ್ನು ಬಳಸಿ ತಯಾರಿಸಿದ ಆಹಾರ ಆನೆಗಳಿಗೆ ಬೆಳಿಗ್ಗೆ ಮತ್ತು ಸಂಜೆ ನೀಡಲಾಗುತ್ತಿದೆ. ತಾಲೀಮು ನಡೆಸಿ ಆಯಾಸಗೊಂಡಿರುವ ಆನೆಗಳನ್ನು ತಂಪಾಗಿಸಲು ಅವಲಕ್ಕಿ ಹಾಗೂ ಮೊಸರು ನೀಡಲಾಗುತ್ತಿದೆ. ಪಶುವೈದ್ಯಾಧಿಕಾರಿಗಳ ಸೂಚನೆ ಮತ್ತು ಮಾರ್ಗದರ್ಶನದಂತೆ ಜೀರ್ಣಕ್ರಿಯೆಗೆ ತೊಂದರೆಯಾಗದಂತೆ ಮಿತ ಪ್ರಮಾಣದಲ್ಲಿ ಪೌಷ್ಟಿಕ ಆಹಾರ ನೀಡಲಾಗುತ್ತಿದೆ. ತಾಲೀಮು ಮುಗಿದ ಬಳಿಕ ವಿಶೇಷವಾಗಿ ತಯಾರಿಸಿದ ರಾಗಿ ಮುದ್ದೆಯನ್ನು ಆನೆಗಳಿಗೆ ನೀಡಲಾಗುತ್ತಿದ್ದು, ಆನೆಗಳು ರಾಗಿ ಮುದ್ದೆಯನ್ನು ಹೆಚ್ಚು ಇಷ್ಟಪಟ್ಟು ಸೇವಿಸುತ್ತಿವೆ. ಈ ಪೌಷ್ಟಿಕ ಆಹಾರವು ಆನೆಗಳ ದೇಹದಾಢ್ಯತೆ ಆರೋಗ್ಯವನ್ನು ಸುಸ್ಥಿತಿಯಲ್ಲಿಡಲು ನೆರವಾಗಲಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

## ಕರ್ನಾಟಕದಲ್ಲಿ ಬೈಕ್-ಟ್ಯಾಕ್ಸಿ ವಿಚಾರದಲ್ಲಿ ಕೇಂದ್ರ-ರಾಜ್ಯ ಸರ್ಕಾರಗಳ ನಡುವೆ ಮತ್ತೆ ಭಿನ್ನಾಭಿಪ್ರಾಯ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಬೈಕ್-ಟ್ಯಾಕ್ಸಿ ಸೇವೆಗಳ ಕಾರ್ಯಾಚರಣೆ ವಿಚಾರದಲ್ಲಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ನಿಲುವಿನ ನಡುವಿನ ಭಿನ್ನಾಭಿಪ್ರಾಯ ಮತ್ತೊಮ್ಮೆ ಬಹಿರಂಗವಾಗಿದೆ. ರಾಜ್ಯ ಸಾರಿಗೆ ಇಲಾಖೆ ಬೈಕ್-ಟ್ಯಾಕ್ಸಿಗಳ ವಿರುದ್ಧ ಜಪ್ತಿ ಸೇರಿದಂತೆ ಕಠಿಣ ಕ್ರಮಕ್ಕೆ ಮುಂದಾಗಿರುವ ಬೆನ್ನಲ್ಲೇ, ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ದೇಶಾದ್ಯಂತ ಬೈಕ್-ಟ್ಯಾಕ್ಸಿಗಳಿಗೆ ಅವಕಾಶ ನೀಡುವಂತೆ ರಾಜ್ಯ ಸರ್ಕಾರಗಳಿಗೆ ಕರೆ ನೀಡಿದ್ದಾರೆ. ಬೈಕ್-ಟ್ಯಾಕ್ಸಿಗಳಿಗೆ ಅವಕಾಶ ಕಲ್ಪಿಸುವುದರಿಂದ ದೇಶದಲ್ಲಿ ಸುಮಾರು 8 ಕೋಟಿ ಉದ್ಯೋಗಾವಕಾಶಗಳು ಸೃಷ್ಟಿಯಾಗಬಹುದು ಎಂದು ಅವರು ಹೇಳಿದ್ದಾರೆ.

ಗಡ್ಕರಿ ಅವರ ಹೇಳಿಕೆ ಕರ್ನಾಟಕದಲ್ಲಿ ಈಗಾಗಲೇ ಕಾನೂನು ಮತ್ತು ನೀತಿಗೆ ಸಂಬಂಧಿಸಿದ ವಿವಾದ ಎದುರಿಸುತ್ತಿರುವ ಬೈಕ್-ಟ್ಯಾಕ್ಸಿ ವ್ಯವಸ್ಥೆಗೆ ಹೊಸ ಆಯಾಮ ನೀಡಿದೆ. ಆದರೆ ಕೇಂದ್ರದ ಸಲಹೆ ರಾಜ್ಯಗಳಿಗೆ ಕಡ್ಡಾಯವಲ್ಲ. ಕರ್ನಾಟಕದಲ್ಲಿ ಬೈಕ್-ಟ್ಯಾಕ್ಸಿ ಸೇವೆ ನಡೆಸಲು ರಾಜ್ಯ ಸರ್ಕಾರದ ಅನುಮತಿ ಅಗತ್ಯ ಎಂದು ಸಾರಿಗೆ ಇಲಾಖೆ ಸ್ಪಷ್ಟಪಡಿಸಿದೆ. ಹೀಗಾಗಿ ಕೇಂದ್ರದ ಬೆಂಬಲವಿದ್ದರೂ ರಾಜ್ಯದ ನೀತಿ ಬದಲಾಗುವವರೆಗೆ ಬೈಕ್-ಟ್ಯಾಕ್ಸಿ ಸೇವೆ ಸ್ವಯಂಚಾಲಿತವಾಗಿ ಕಾನೂನುಬದ್ಧವಾಗುವುದಿಲ್ಲ ಎಂಬುದು ಇಲಾಖೆಯ ನಿಲುವಾಗಿದೆ. ಬೈಕ್-ಟ್ಯಾಕ್ಸಿ ವಿವಾದ ಕರ್ನಾಟಕದಲ್ಲಿ ಹೊಸದಲ್ಲ. 2025ರ ಏಪ್ರಿಲ್‌ನಲ್ಲಿ ಏಕಸದಸ್ಯ ಪೀಠವು ರಾಜ್ಯ ಸರ್ಕಾರ ಸಂಬಂಧಿತ ಮಾರ್ಗಸೂಚಿಗಳನ್ನು ರೂಪಿಸುವವರೆಗೆ ಬೈಕ್-ಟ್ಯಾಕ್ಸಿ ಸೇವೆ ನಡೆಸಲು ಸಾಧ್ಯವಿಲ್ಲ ಎಂಬ ನಿಲುವು ವ್ಯಕ್ತಪಡಿಸಿತ್ತು. ಇದನ್ನು ಪ್ರಶ್ನಿಸಿ ಹಲವು ಸೇವಾ ಸಂಸ್ಥೆಗಳು ಹಾಗೂ ಬೈಕ್ ಮಾಲೀಕರು ಮೇಲ್ಮನವಿ ಸಲ್ಲಿಸಿದ್ದರು. ಈ ಮೇಲ್ಮನವಿಗಳ ವಿಚಾರಣೆ ನಡೆಸಿದ ಕರ್ನಾಟಕ ಹೈಕೋರ್ಟ್‌ನ ವಿಭಾಗೀಯ ಪೀಠವು 2026ರ ಜನವರಿ 23ರಂದು ಮಹತ್ವದ ತೀರ್ಪು ನೀಡಿತ್ತು. ಮೋಟಾರ್‌ಸೈಕಲ್‌ಗಳನ್ನು ಸಾರಿಗೆ ವಾಹನಗಳಾಗಿ ನೋಂದಾಯಿಸಿ, ಕಾನೂನುಬದ್ಧ ಷರತ್ತುಗಳೊಂದಿಗೆ ಕಾಂಟ್ರಾಕ್ಟ್ ಕ್ಯಾರೇಜ್ ಪರವಾನಗಿ ನೀಡುವ ಕುರಿತು ಅರ್ಜಿಗಳನ್ನು ರಾಜ್ಯದ ಅಧಿಕಾರಿಗಳು ಪರಿಗಣಿಸಬೇಕು ಎಂದು ನ್ಯಾಯಾಲಯ ನಿರ್ದೇಶಿಸಿತ್ತು.



### ಬಿಳಿ ಬೋರ್ಡ್ ವಾಹನವೇ ಪ್ರಮುಖ ಗೊಂದಲ

ಇದೀಗ ಬೈಕ್-ಟ್ಯಾಕ್ಸಿ ವಿಚಾರದಲ್ಲಿ ಪ್ರಮುಖ ಕಾನೂನು ಗೊಂದಲ ಬಿಳಿ ಬೋರ್ಡ್ ವಾಹನಗಳ ಬಳಕೆಯ ಸುತ್ತ ಇದೆ. ಖಾಸಗಿ ಬಳಕೆಗೆ ನೋಂದಾಯಿಸಲಾದ ಬಿಳಿ ಬೋರ್ಡ್ ದ್ವಿಚಕ್ರ ವಾಹನಗಳನ್ನು ಪ್ರಯಾಣಿಕರನ್ನು ಸಾಗಿಸುವ ವಾಣಿಜ್ಯ ಬೈಕ್-ಟ್ಯಾಕ್ಸಿಗಳಾಗಿ ಬಳಸುವುದು ಹಾಗೂ ಹಳದಿ ಬೋರ್ಡ್‌ನ ಸಾರಿಗೆ ವಾಹನವಾಗಿ ನೋಂದಣಿ ಪಡೆದು ಅಗತ್ಯ ಪರವಾನಗಿ ಪಡೆಯುವುದು ಒಂದೇ ರೀತಿಯ ವ್ಯವಸ್ಥೆಗಳಲ್ಲ.

ಹೈಕೋರ್ಟ್‌ನ ಜನವರಿ ತೀರ್ಪು ಮುಖ್ಯವಾಗಿ ಮೋಟಾರ್‌ಸೈಕಲ್‌ಗಳನ್ನು ಸಾರಿಗೆ ವಾಹನಗಳಾಗಿ ನೋಂದಾಯಿಸಿ, ಅಗತ್ಯ ಪರವಾನಗಿ ಪಡೆಯುವ ಮಾರ್ಗವನ್ನು ಪರಿಗಣಿಸಿದೆ.

# ವಿದೇಶ ಅಧ್ಯಯನ 2026ಕ್ಕೆ ಸಿಎಂ ಚಾಲನೆ: ಉದ್ಯೋಗಿಗಳಾಗುವುದಕ್ಕಿಂತ ಉದ್ಯೋಗದಾತರಾಗಲು ಕರೆ

## ನಮ್ಮ ಮಕ್ಕಳು ಜಾಗತಿಕ ಮಟ್ಟದಲ್ಲಿ ಕಲಿಯಬೇಕು. ಅವರು ಕೇವಲ ಉದ್ಯೋಗಿಗಳಾಗುವುದಲ್ಲ, ಉದ್ಯೋಗದಾತರಾಗಬೇಕು ಎಂಬುದು ನಮ್ಮ ಬಯಕೆ ಎಂದು ಸಿಎಂ ಡಿ.ಕೆ. ಶಿವಕುಮಾರ್

• ಉದಯವಾಹಿನಿ, ಬೆಂಗಳೂರು

ನಮ್ಮಲ್ಲಿರುವಂತಹ ಪ್ರತಿಭಾವಂತ ಮಾನವ ಸಂಪನ್ಮೂಲ, ದೇಶದ ಬೇರೆ ಯಾವುದೇ ರಾಜ್ಯಗಳಲ್ಲಿ ಇಲ್ಲ. ನಮ್ಮ ಮಕ್ಕಳು ಜಾಗತಿಕ ಮಟ್ಟದಲ್ಲಿ ಕಲಿಯಬೇಕು. ಅವರು ಕೇವಲ ಉದ್ಯೋಗಿಗಳಾಗುವುದಲ್ಲ, ಉದ್ಯೋಗದಾತರಾಗಬೇಕು ಎಂಬುದು ನಮ್ಮ ಬಯಕೆ ಎಂದು ಸಿಎಂ ಡಿ. ಕೆ. ಶಿವಕುಮಾರ್ ತಿಳಿಸಿದರು. ಕೌಶಲ್ಯಾಭಿವೃದ್ಧಿ ಇಲಾಖೆ ವತಿಯಿಂದ ಬೆಂಗಳೂರಿನ ಅರಮನೆ ಮೈದಾನದಲ್ಲಿ ಭಾನುವಾರ ನಡೆದ ವಿದೇಶದಲ್ಲಿ ಅಧ್ಯಯನ 2026 ಕಾರ್ಯಕ್ರಮಕ್ಕೆ ಸಿಎಂ ಡಿ.ಕೆ. ಶಿವಕುಮಾರ್ ಚಾಲನೆ ನೀಡಿ ಮಾತನಾಡಿದರು. ದೇಶದ ಅಧ್ಯಯನಕ್ಕೆ ನಮ್ಮ ಸರ್ಕಾರ ಹೊಸ ಬಾಗಿಲು ತೆರೆದಿದೆ. ಶರಣ ಪ್ರಕಾಶ್ ಪಾಟೀಲ್ ಅವರ ನೇತೃತ್ವದಲ್ಲಿ ಸಾಗರೋತ್ತರ ಜ್ಞಾನ ಬೆಸೆಯುವಲ್ಲಿ ಅತ್ಯುತ್ತಮ ಕಾರ್ಯನಿರ್ವಹಿಸುತ್ತಿದ್ದಾರೆ. ಜ್ಞಾನದ ಮೇಲಿನ ಹೂಡಿಕೆ ಪ್ರತಿಯೊಬ್ಬರಿಗೂ ಅತ್ಯುತ್ತಮ ಆಸ್ತಿಯಾಗುತ್ತದೆ. ಮಾನವನಿಗೆ ಎಲ್ಲೆಗಳಿವೆ, ಆದರೆ ಜ್ಞಾನಕ್ಕೆ ಎಲ್ಲೆಗಳಿಲ್ಲ. ಜಾಗತಿಕ ಮಟ್ಟದ ಶಿಕ್ಷಣದ ಅವಕಾಶ ಪಡೆಯುವುದರಿಂದ ಮಾನಸಿಕವಾಗಿ ಬಲಿಷ್ಠರನ್ನಾಗಿಸುತ್ತದೆ ಎಂದರು.

ರಪರಪ ಹರಿಸದ, ದಾಯಾದಿ ಧಕ್ಕಿಸದ, ಬೆಂಕಿಯಲ್ಲಿ ಸುಡದ, ನೀರಿನಲ್ಲಿ ನೆನೆಯದ, ಗುಪ್ತ ನಿಧಿ ವಿದ್ಯೆ ಎಂದು ನಮ್ಮ ಗುರುಗಳು ನಮಗೆ ಕಲಿಸಿದ್ದರು. ನಾವು ಕಲಿತ ವಿದ್ಯೆಯನ್ನು ಯಾರೂ ಕಸಿಯಲು ಸಾಧ್ಯವಿಲ್ಲ. ಸಚಿವರು ಹಾಗೂ ಸರ್ಕಾರ ನಿಮಗೆ ಜಾಗತಿಕ ಮಟ್ಟದಲ್ಲಿ ಅಧ್ಯಯನಕ್ಕೆ ಅವಕಾಶ ಕಲ್ಪಿಸಿ ನಿಮ್ಮ ಭವಿಷ್ಯವನ್ನು ಉಜ್ವಲಿಸುವಂತೆ ಮಾಡಲಾಗುತ್ತಿದೆ ಎಂದು ಸಿಎಂ ಹೇಳಿದರು.




ಬೆಂಗಳೂರು ಜಾಗತಿಕ ನಗರ. ಇಲ್ಲಿ 2 ಲಕ್ಷ ವಿದೇಶಿ ಪಾಸ್‌ಪೋರ್ಟ್‌ದಾರರು ಕೆಲಸ ಮಾಡುತ್ತಿದ್ದು, ಸಿಲಿಕಾನ್ ವ್ಯಾಲಿ ಕ್ಯಾಲಿಫೋರ್ನಿಯದಲ್ಲಿ 16 ಲಕ್ಷ ಐಟಿ ವೃತ್ತಿಪರರು ಇದ್ದರೆ, ಬೆಂಗಳೂರಿನಲ್ಲಿ 26 ಲಕ್ಷ ಐಟಿ ವೃತ್ತಿಪರರು ಇದ್ದಾರೆ. ಪ್ರತಿ ವರ್ಷ 1 ಲಕ್ಷಕ್ಕೂ ಹೆಚ್ಚು ಇಂಜಿನಿಯರ್‌ಗಳನ್ನು, 13,940 ವೈದ್ಯರನ್ನು ಉತ್ಪಾದನೆ ಮಾಡುತ್ತಿದ್ದು, ಇಷ್ಟು ದೊಡ್ಡ ಪ್ರಮಾಣದಲ್ಲಿ ಈ ಮಾನವ ಸಂಪನ್ಮೂಲವನ್ನು ಬೇರೆ ಎಲ್ಲೂ ತಯಾರಿಸುತ್ತಿಲ್ಲ ಎಂದು ವಿವರಿಸಿದರು.

ಮಹಾತ್ಮ ಗಾಂಧಿ, ಅಂಬೇಡ್ಕರ್, ರಾಜಾರಾಮ್ ಮೋಹನ್ ರಾಯ್ ಅವರಂತಹ ನಾಯಕರು ವಿದೇಶದಲ್ಲಿ ಓದಿ, ನಮ್ಮ ದೇಶವನ್ನು ಮುನ್ನಡೆಸಿದ್ದಾರೆ. ವಿದೇಶದ ವಿವಿಗಳಲ್ಲಿ ನಮ್ಮ ಮಕ್ಕಳಿಗೆ ಅಧ್ಯಯನಕ್ಕೆ ಅವಕಾಶ ಕಲ್ಪಿಸಲು ಕರ್ನಾಟಕ ಸರ್ಕಾರ ಈ ಅವಕಾಶ ಕಲ್ಪಿಸಿದೆ. ಈ ಕಾರ್ಯಕ್ರಮದಲ್ಲಿ 80ಕ್ಕೂ ಹೆಚ್ಚು ವಿವಿಗಳು ಭಾಗವಹಿಸಿದ್ದು, 300ಕ್ಕೂ ಹೆಚ್ಚು ವಿಷಯಗಳಲ್ಲಿ ಅಧ್ಯಯನಕ್ಕೆ ಅವಕಾಶ ಕಲ್ಪಿಸಲಾಗಿದೆ. ಜೊತೆಗೆ ಸರ್ಕಾರದ ವಿವಿಧ ಇಲಾಖೆಗಳಿಂದ ವಿಶೇಷ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ವಿವಿಧ ಬ್ಯಾಂಕ್‌ಗಳು ನೆರವು ನೀಡುತ್ತಿದ್ದು, 2 ಕೋಟಿ ರೂ. ವರೆಗೂ ಸಾಲ ಸೌಲಭ್ಯ ನೀಡುತ್ತಿವೆ. ರಾಜ್ಯದ ವಿದ್ಯಾರ್ಥಿಗಳು ಈ ಅವಕಾಶ ಸದುಪಯೋಗಪಡಿಸಿಕೊಂಡು ಬಲಿಷ್ಠವಾಗಬೇಕು. ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ನಾವು ಕ್ವೀನ್ಸ್ ಲ್ಯಾಂಡ್ ವಿವಿ ಜೊತೆಗೆ ಒಡಂಬಡಿಕೆ ಮಾಡಿಕೊಂಡಿದ್ದು, ವಿದೇಶದ ವಿವಿಗಳಲ್ಲಿ ವ್ಯಾಸಂಗ ಮಾಡಲು 3,145 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ನಮ್ಮ ಮಕ್ಕಳು ವಿದ್ಯಾಭ್ಯಾಸ ಮುಗಿಸಿದ್ದರೂ ಅವರು ಹೆಚ್ಚಿನ ಮಾಹಿತಿ ಪಡೆಯಲು ಇಲ್ಲಿಗೆ ಬನ್ನಿ ಎಂದು ಕರೆದಿರುವೆ. 80ಕ್ಕೂ ಹೆಚ್ಚು ವಿವಿ, 300ಕ್ಕೂ ಹೆಚ್ಚು ವಿಷಯ, 3,145 ವಿದ್ಯಾರ್ಥಿಗಳಿಗೆ ಅವಕಾಶ ಸಿಗಲಿದೆ ಎಂದು ತಿಳಿಸಿದರುನಿಮ್ಮ ಭವಿಷ್ಯ ರಾಜ್ಯದ ಭವಿಷ್ಯ, ನಿಮ್ಮ ಶಕ್ತಿ ದೇಶದ ಶಕ್ತಿ. ವಿದ್ಯಾರ್ಥಿಗಳು ನಮ್ಮ ಆಸ್ತಿಗಳು. ನಮ್ಮಲ್ಲಿನ ಸಂಸ್ಕೃತಿ, ಇತಿಹಾಸ, ಬಾಂಧವ್ಯದ ಮೂಲಕ ನಮ್ಮ ಮಕ್ಕಳು ಉತ್ತಮ ಪ್ರಜೆಗಳಾಗುತ್ತಿದ್ದಾರೆ. ನೀವು ನಿಮ್ಮ ಮೂಲ ಮರೆಯಬಾರದು, ಮರೆತರೆ ಯಶಸ್ಸು ಸಿಗುವುದಿಲ್ಲ. ಹೀಗಾಗಿ ನೀವು ನಿಮ್ಮ ಪೋಷಕರು, ಶಿಕ್ಷಕರನ್ನು ಮರೆಯಬಾರದು ಎಂದು ಹೇಳಿದರು.

### ಏನಿದು ವಿದೇಶದಲ್ಲಿ ಅಧ್ಯಯನ ಯೋಜನೆ..?

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯಲು ವಿದೇಶದಲ್ಲಿ ಅಧ್ಯಯನ ಎಂಬ ಮಹತ್ವಾಕಾಂಕ್ಷೆಯ ಯೋಜನೆಯನ್ನು ಜಾರಿಗೆ ತಂದಿದೆ. ಖಾಸಗಿ ಏಜೆನ್ಸಿಗಳ ದಲ್ಲಾಳಿಗಳ ಹಣದ ಹಾವಳಿಯಿಲ್ಲದೆ, ಆರ್ಥಿಕವಾಗಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೂ ಜಾಗತಿಕ ಶಿಕ್ಷಣ ಸಿಗುವಂತೆ ಮಾಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ವಿದೇಶಿ ವಿಶ್ವವಿದ್ಯಾಲಯಗಳ ಆಯ್ಕೆ, ಅರ್ಜಿ ಸಲ್ಲಿಕೆ ಮತ್ತು ವೀಸಾ ಪ್ರಕ್ರಿಯೆಗಳಿಗೆ ತಜ್ಞರಿಂದ ಸಂಪೂರ್ಣ ಉಚಿತ ಕೌನ್ಸಿಲಿಂಗ್ ನೀಡಲಾಗುತ್ತದೆ. ಜಾಗತಿಕ ಮಟ್ಟದ 80ಕ್ಕೂ ಹೆಚ್ಚು ಪ್ರತಿಷ್ಠಿತ ವಿದೇಶಿ ವಿಶ್ವವಿದ್ಯಾಲಯಗಳೊಂದಿಗೆ ಇಲಾಖೆ ನೇರ ಒಪ್ಪಂದ ಮಾಡಿಕೊಂಡಿದ್ದು, ಅರ್ಹ ವಿದ್ಯಾರ್ಥಿಗಳಿಗೆ ಶೇ.50 ರವರೆಗೆ ವಿದ್ಯಾರ್ಥಿವೇತನ ಪಡೆಯಲು ನೆರವಾಗಲಿದೆ. ವಿದ್ಯಾರ್ಥಿಗಳು ವಿದೇಶಕ್ಕೆ ಹೋದ ಮೇಲೆಯೂ ಅವರ ಸುರಕ್ಷತೆ, ಶೈಕ್ಷಣಿಕ ಪ್ರಗತಿಯ ಉಸ್ತುವಾರಿ ಮತ್ತು ಅಗತ್ಯವಿದ್ದರೆ ಕಾನೂನು ನೆರವನ್ನು ಇಲಾಖೆ ಒದಗಿಸುತ್ತದೆ.

**ಈ ದಿನದ ದರ** ಪೆಟ್ರೋಲ್: 110.98₹/L ಡೀಸೆಲ್ : 98.91₹/L ಬಂಗಾರ: ₹ 15,480/Gram 24ct ₹ 14,190 /Gram 22ct ಬೆಳ್ಳಿ: ₹240.00/

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಗ್ಗೆ | 10:30 ರಿಂದ 12:00 |

**ಮೇಷ** ಕೆಲವು ಮಾನಸಿಕ ಒತ್ತಡಗಳ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ನಿಮ್ಮ ನೆರೆಹೊರೆಯವರು ಇಂದು ನಿಮ್ಮ ಹತ್ತಿರ ಹಣ ಸಾಲ ಕೇಳಲು ಬರಬಹುದು, ಅವರಿಗೆ ಸಾಲ ಕೊಡುವುದಕ್ಕಿಂತ ಮುಂಚೆ ಅವರ ನಂಬಿಕೆಯನ್ನು ಅಗತ್ಯವಾಗಿ ಪರೀಕ್ಷಿಸಿ, ಇಲ್ಲದಿದ್ದರೆ ಹಣದ ನಷ್ಟವಾಗುವ ಸಾಧ್ಯತೆ ಇದೆ.

**ವೃಷಭ** ಹಳೆಯ ಸ್ನೇಹಿತರ ಜೊತೆಗಿನ ಒಂದು ಪುನರ್ಮಿಲನ ನಿಮ್ಮನ್ನು ಚೇತೋಹಾರಿಯಾಗಿರಿಸುತ್ತದೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ.

**ಮಿಥುನ** ಹಾಸ್ಯಪ್ರಜ್ಞೆಯಿರುವ ಸಂಬಂಧಿಕರ ಸಂಗ ನಿಮ್ಮ ಉದ್ವೇಗವನ್ನು ಕಡಿಮೆ ಮಾಡುತ್ತದೆ ಮತ್ತು ನಿಮಗೆ ತುಂಬಾ ಅಗತ್ಯವಾಗಿರುವ ಶಮನವನ್ನು ನೀಡುತ್ತದೆ. ಈ ರೀತಿಯ ಸಂಬಂಧಿಗಳನ್ನು ಹೊಂದಿದ ನೀವೇ ಅದೃಷ್ಟವಂತರು. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ.

**ಕರ್ಕಾಟಕ** ನೀವು ಚೈತನ್ಯಯುಕ್ತವಾಗಿರುತ್ತೀರಿ ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ. ರಾತ್ರಿಯ ವೇಳೆಯಲ್ಲಿ ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ.

**ಸಿಂಹ** ನಿಮ್ಮ ಮನಸ್ಸಿನಲ್ಲಿ ಸಕಾರಾತ್ಮಕ ಆಲೋಚನೆಗಳನ್ನು ತನ್ನಿ. ಇಂದು ನೀವು ಆಲ್ಕೊಹಾಲ್ಯುಕ್ತ ಮದ್ಯವನ್ನು ಸೇವಿಸಬಾರದು, ಮಾದಕತೆಯ ಸಂದರ್ಭದಲ್ಲಿ ನೀವು ಯಾವುದೇ ಬೆಲೆಬಾಳುವ ವಸ್ತುಗಳನ್ನು ಕಳೆದುಕೊಳ್ಳಬಹುದು. ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ.

**ಕನ್ಯಾ** ನಗು ನಿಮ್ಮ ಎಲ್ಲಾ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಕೆಲವರು ನಿಮ್ಮನ್ನು ಕೋಪಗೊಳಿಸಬಹುದಾದರೂ ಅವರನ್ನು ನಿರ್ಲಕ್ಷಿಸಿ. ಡೇಟ್ ಕಾರ್ಯಕ್ರಮ ವಿಫಲವಾಗಬಹುದಾದ್ದರಿಂದ ನಿರಾಶೆಯಾಗಬಹುದು.

**ತುಲಾ** ಸ್ವಲ್ಪ್ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ನಿಮ್ಮ ಕೋಪವನ್ನು ನಿಯಂತ್ರಿಸಿ ಹಾಗೂ ಕುಟುಂಬದ ಸದಸ್ಯರ ಮನ ನೋಯಿಸುವುದನ್ನು ತಪ್ಪಿಸಿ. ಇದೇ ಸಮಯದಲ್ಲಿ ಕೋಪ ಅಲ್ಪಾವಧಿ ಹುಚ್ಚು ಹಾಗೂ ಇದು ನಿಮ್ಮನ್ನು ಕೆಲವು ಗಂಭೀರ ತಪ್ಪುಗಳನ್ನು ಮಾಡಲು ಪ್ರೇರೇಪಿಸಬಹುದು.

**ವೃಶ್ಚಿಕ** ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ಹಣ ನಿಮ್ಮ ಕೈಗಳ ಮೂಲಕ ಸುಲಭವಾಗಿ ಜಾರಿಹೋದರೂ – ನಿಮ್ಮ ಅದೃಷ್ಟದ ತಾರೆಗಳು ನಿಮಗೆ ಹಣಕಾಸು ಸುಲಭವಾಗಿ ದೊರಕುವಂತೆ ಮಾಡುತ್ತದೆ. ಮನೆಯ ಸುಧಾರಣೆಯ ಯೋಜನೆಗಳನ್ನು ಪರಿಗಣಿಸಬೇಕು.

**ಧನಸ್ಸು** ನಿಮ್ಮ ಬಲವಾದ ಧೃಢತೆ ಮತ್ತು ನಿರ್ಭಯತೆ ನಿಮ್ಮ ಮಾನಸಿಕ ಶಕ್ತಿ ವರ್ಧಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತವೆ. ಇದು ನಿಮಗೆ ಯಾವುದೇ ಪರಿಸ್ಥಿತಿಯನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಉತ್ತೇಜಿಸುವುದರಿಂದ ಇದನ್ನು ಕಾಯ್ದುಕೊಳ್ಳಿ. ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ.

**ಮಕರ** ತುಂಬಾ ಪ್ರಯಾಣ ನಿಮಗೆ ದಣಿವಾಗಿಸುತ್ತದೆ ದೈರಿ ಉದ್ಯಮಕ್ಕೆ ಸೇರಿರುವವರು ಇಂದು ಆರ್ಥಿಕ ಲಾಭವನ್ನು ಪಡೆಯುವ ಪ್ರಬಲ ಸಾಧ್ಯತೆ ಇದೆ. ನಿಮ್ಮ ಅಸಡ್ಡೆಯ ವರ್ತನೆ ಪೋಷಕರನ್ನು ಚಿಂತೆಗೀಡು ಮಾಡಬಹುದು. ನೀವು ಯಾವುದೇ ಹೊಸ ಯೋಜನೆಯನ್ನು ಆರಂಭಿಸುವ ಮೊದಲು ಅವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬಹುದು.

**ಕುಂಭ** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ನೀವು ಜನರು ನಿಮ್ಮಿಂದ ಏನು ಬಯಸುತ್ತಾರೆಂದು ನಿಖರವಾಗಿ ತಿಳಿದಿರುವಂತೆ ತೋರುತ್ತದೆ – ಆದರೆ ಇಂದು ನಿಮ್ಮ ಖರ್ಚುಗಳಲ್ಲಿ ತುಂಬಾ ಉದಾರಿಯಾಗದಿರಲು ಪ್ರಯತ್ನಿಸಿ.

**ಮೀನ** ದೀರ್ಘಕಾಲೀನ ಅನಾರೋಗ್ಯದ ಜೊತೆ ಹೋರಾಡುವಾಗ ಆತ್ಮವಿಶ್ವಾಸ ಶೌರ್ಯದ ಮೂಲವೆಂದು ತಿಳಿದಿರಿ. ತರಾತುರಿಯಲ್ಲಿ ಹೂಡಿಕೆಗಳನ್ನು ಮಾಡಬೇಡಿ ಎಲ್ಲಾ ಸಾಧ್ಯವಿರುವ ಕೋನಗಳಿಂದ ಹೂಡಿಕೆಯನ್ನು ಪರಿಶೀಲಿಸದೇ ಹೋದರೆ ನಷ್ಟ ಖಚಿತ. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ.

# ಗೃಹಲಕ್ಷ್ಮಿ ಯೋಜನೆ ಹಣ ನೀಡದ ಕಾರಣಕ್ಕೆ ಸಿಎಂ ಸ್ಥಾನ ಹೋಯ್ತಾ?

• **ಉದಯವಾಹಿನಿ ಚಿಕ್ಕಮಗಳೂರು:**

ಗೃಹಲಕ್ಷ್ಮಿ ಯೋಜನೆ ಹಣ ನೀಡದ ಕಾರಣಕ್ಕೆ ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವಂತಾಯಿತು ಎಂಬ ಚರ್ಚೆಗಳು ನಡೆಯುತ್ತಿವೆ. ಇತ್ತೀಚಿಗೆ ವಿಧಾನಪರಿಷತ್ ಸದಸ್ಯ ಸಿಟಿ ರವಿ ಕೂಡಾ ಇಂತಹ ಮಾತುಗಳನ್ನಾಡಿದ್ದರು.

ಈ ಕುರಿತು ಕಡೂರಿನಲ್ಲಿ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಸಿಟಿ ರವಿಗೆ ಸಖತ್ ಟಾಂಗ್ ಕೊಟ್ಟರು. ತಮ್ಮಯ್ಯಾ ಯಾರಯ್ಯಾ ನಿನ್ನ ಮೇಲೆ ಸೋತದ್ದು ಸಿ.ಟಿ.ರವಿ. ಸಿ.ಟಿ.ರವಿ ಮೊನ್ನೆ ಹೇಳ್ತಿದ್ದನಂತೆ. ಗೃಹಲಕ್ಷ್ಮಿ ಯೋಜನೆ ಕೊಡ್ಲಿಲ್ಲ ಅದಕ್ಕೆ ಸಿಎಂ ಸ್ಥಾನ ಹೋಯ್ತು ಅಂದನಂತೆ. ನಾನು, ರಾಹುಲ್ ಗಾಂದಿಗೆ ಮಾತು ಕೊಟ್ಟಿದ್ದೆ. ಅವರು ರಾಜೀನಾಮೆ ಕೊಡು ಅಂದ್ರು, ಕೊಟ್ಟೆ ಎಂದು ಹೇಳಿದರು.

ಬಹಳ ಜನ ನನಗೆ ಕೊಡಬೇಡಿ ಸರ್ ಅಂದ್ರು, ಇಲ್ಲ ಮಾತು ಕೊಟ್ಟಿದ್ದೇನೆ ಕೊಡಬೇಕು


ಉದಯವಾಹಿನಿ ಚಿತ್ರ

ಅಂತ ಕೊಟ್ಟೆ. ರಾಜಕೀಯದಲ್ಲಿ ಕೊಟ್ಟ ಮಾತು ಉಳಿಸಿಕೊಂಡ ಯಾವುದಾದರೂ ಸರ್ಕಾರ ಇದ್ದರೆ ಅದು ಸಿದ್ದರಾಮಯ್ಯ ಸರ್ಕಾರ ಎಂದು ಸಿ.ಟಿ.ರವಿ ವಿರುದ್ಧ ವಾಗ್ದಾಳಿ ನಡೆಸಿದರು.

ನಾನು ಯಾವುದೋ ದೇವಸ್ಥಾನಕ್ಕೆ ಹೋದಾಗ ಮೋದಿ ಮೋದಿ ಅಂತಿದ್ರು. ಮೋದಿ ಸ್ವಾತಂತ್ರ್ಯಕ್ಕೆ ಹೋರಾಡಿದ್ರಾ, ಸಂಗೊಳ್ಳಿ ರಾಯಣ್ಣ ರೀತಿ ಹೋರಾಡಿದ್ರಾ? ಜನ ಸುಮ್ನೆ ಮೋದಿ ಮೋದಿ ಅಂತಾರೆ. 2 ಕೋಟಿ ಕೆಲಸ ಎಲ್ಲಿ, ಅಚ್ಚೇ ದಿನ್ ಎಲ್ಲಿ, ರೈತರ ಆದಾಯ ದುಪ್ಪಟ್ಟು ಮಾಡ್ತೀನಿ ಅಂದ್ರು, ಮಾಡಿದ್ರಾ? ಎಂದು ಪ್ರಶ್ನಿಸಿದರು. 12 ವರ್ಷ ಆಯ್ತು ಪ್ರಧಾನಿ ಆಗಿ, ಕಪ್ಪು ಹಣ ತಂದು 15 ಲಕ್ಷ ಹಾಕ್ತೀನಿ ಅಂದ್ರು, ಹಾಕಿದ್ರಾ, ಪಾರ್ಲಿಮೆಂಟ್ ಚುನಾವಣೆಯಲ್ಲಿ ಬಿಜೆಪಿಗೆ ಏಕೆ ಮತ ಹಾಕಬೇಕು? ಪಾಪ ಜನರಗೆ ತಪ್ಪು ಮಾಹಿತಿ ನೀಡಿ ತಪ್ಪು ದಾರಿಗೆ ಎಳೆದಿದ್ದಾರೆ ಎಂದು ಹೇಳಿದರು.

# ವೈಮಾನಿಕ ಸಮೀಕ್ಷೆಯಿಂದ ಮಾತ್ರ ಪರಿಹಾರ ಸಾಧ್ಯ; ಸಚಿವ ಯು.ಟಿ. ಖಾದರ್

## ಇಂತಹ ಹೇಳಿಕೆಗಳಿಗೆ ನಾವು ಕಿಂಚಿತ್ತೂ ಮಹತ್ವ ನೀಡುವುದಿಲ್ಲ. ವಿರೋಧ ಪಕ್ಷದಲ್ಲಿರುವಾಗ ಅವರು ಟೀಕೆ ಮಾಡಲೇಬೇಕಲ್ಲವೇ?

• **ಉದಯವಾಹಿನಿ ಮಂಗಳೂರು:**

ಪ್ರವಾಹ ಹಾಗೂ ಬರ ಪರಿಸ್ಥಿತಿಯ ವೈಮಾನಿಕ ಸಮೀಕ್ಷೆ, ಸಚಿವ ಸಂಪುಟದ ತೀರ್ಮಾನಗಳು ಹಾಗೂ ಮಾಜಿ ಸಚಿವ ಬಿ. ನಾಗೇಂದ್ರ ಅವರ ಪ್ರಕರಣದ ಕುರಿತು ವಿರೋಧ ಪಕ್ಷಗಳು ಮಾಡುತ್ತಿರುವ ಆರೋಪಗಳಿಗೆ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ. ಖಾದರ್ ತೀಕ್ಷ್ಣ ಪ್ರತಿಕ್ರಿಯೆ ನೀಡಿದ್ದಾರೆ. ಭಾನುವಾರ ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸರ್ಕಾರ ಜನಸಾಮಾನ್ಯರ ಪರವಾಗಿದ್ದು, ಬಿಜೆಪಿಯ ಟೀಕೆ–ಟಿಪ್ಪಣಿಗಳಿಗೆ ನಾವು ಮಹತ್ವ ಕೊಡುವುದಿಲ್ಲ ಎಂದರು.

ಮುಖ್ಯಮಂತ್ರಿಗಳು ನೆರೆ ಮತ್ತು ಬರ ವೀಕ್ಷಣೆಗೆ ಹೆಲಿಕಾಪ್ಟರ್ ಬಳಸಿದ್ದನ್ನು ಬಿಜೆಪಿ ಟೀಕಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಸಚಿವರು, ಬಿಜೆಪಿಯವರ ಇಂತಹ ಹೇಳಿಕೆಗಳಿಗೆ ನಾವು ಕಿಂಚಿತ್ತೂ ಮಹತ್ವ

1 : ಸಮೀಕ್ಷೆ ವಿವಾದಕ್ಕೆ ಸ್ಪಷ್ಟನೆ
2 : ಎಷ್ಟು ಪ್ರದೇಶ ನೋಡಲು ಸಾಧ್ಯ
3 : ಬರದ ತೀವ್ರತೆಯ ಸಮಗ್ರ ಚಿತ್ರಣ

ನೀಡುವುದಿಲ್ಲ. ವಿರೋಧ ಪಕ್ಷದಲ್ಲಿರುವಾಗ ಅವರು ಟೀಕೆ ಮಾಡಲೇಬೇಕಲ್ಲವೇ? ಕಾಂಗ್ರೆಸ್ ಪಕ್ಷ ಬಿಜೆಪಿಯನ್ನು ನೋಡಿ ರಾಜಕೀಯ ಮಾಡುವುದಿಲ್ಲ. ನೆಲದ ಮೇಲೆ ವಾಹನಗಳಲ್ಲಿ


ಉದಯವಾಹಿನಿ ಚಿತ್ರ

ಹೋದರೆ ಎಷ್ಟು ದೂರ, ಎಷ್ಟು ಪ್ರದೇಶ ನೋಡಲು ಸಾಧ್ಯ? ಅದೇ ಹೆಲಿಕಾಪ್ಟರ್ ಮೂಲಕ ವೈಮಾನಿಕ ಸಮೀಕ್ಷೆ ನಡೆಸಿದಾಗ ಸಂಪೂರ್ಣ ಜಲಾವೃತಗೊಂಡ ಜಾಗಗಳು, ಹಾನಿಯ ಪ್ರಮಾಣ ಮತ್ತು ಬರದ ತೀವ್ರತೆಯ ಸಮಗ್ರ ಚಿತ್ರಣ ಸಿಗುತ್ತದೆ. ದೇಶದ ಪ್ರಧಾನ ಮಂತ್ರಿಗಳಾಗಲಿ, ಬೇರೆ ರಾಜ್ಯಗಳ ಮುಖ್ಯಮಂತ್ರಿಗಳಾಗಲಿ ಅಥವಾ ನಮ್ಮ ರಾಜ್ಯದ ಹಿಂದಿನ ಸಿಎಂ ಆಗಲಿ, ವಿಪಕ್ಷಗಳ ನಾಯಕರಾಗಲಿ ಪ್ರಕೃತಿ ವಿಕೋಪ ಸಂಭವಿಸಿದಾಗ ವೈಮಾನಿಕ ಸಮೀಕ್ಷೆ ನಡೆಸಿರುವುದನ್ನು ಎಲ್ಲರೂ ನೋಡಿದ್ದಾರೆ.

ಜನರ ನೋವಿಗೆ ಮೊದಲು ಸ್ಪಂದಿಸಿ, ಪರಿಹಾರ ಒದಗಿಸುವುದು ನಮ್ಮ ಆದ್ಯತೆಯೇ ಹೊರತು, ವಿಪಕ್ಷಗಳ ರಾಜಕಾರಣದ ಮಾತುಗಳಿಗೆ ಮನ್ನಣೆ ನೀಡುವುದಲ್ಲ ಎಂದು ಹೇಳಿದ್ದಾರೆ.

ವಾಲ್ಮೀಕಿ ಅಭಿವೃದ್ಧಿ ನಿಗಮ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಬಿ. ನಾಗೇಂದ್ರ ಅವರ ವಿಚಾರ ಪ್ರಸ್ತಾಪಿಸಿದ ಸಚಿವರು, ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಮೊದಲೇ ಅವರು ತಮ್ಮ ನೈತಿಕ ಜವಾಬ್ದಾರಿ ಹೊತ್ತು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ ಎಂದು ಸಮರ್ಥಿಸಿಕೊಂಡರು. ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಮೊದಲೇ ನಾಗೇಂದ್ರ ಅವರು ತಾವಾಗಿಯೇ ನೈತಿಕ ಹೊಣೆ ಹೊತ್ತು ರಾಜೀನಾಮೆ ಸಲ್ಲಿಸಿದ್ದಾರೆ.

ಅವರ ಈ ನೈತಿಕ ನಿಲುವನ್ನು ಎಲ್ಲರೂ ಶ್ಲಾಘಿಸಬೇಕು.


> ನಾವು ಕೇವಲ ಚುನಾವಣೆ ದೃಷ್ಟಿಯಲ್ಲಿಟ್ಟುಕೊಂಡು ಕೆಲಸ ಮಾಡುವವರಲ್ಲ. ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷಗಳು ಜೊತೆಗೂಡಿ ಜನರ ಹಿತಕ್ಕಾಗಿ ಶ್ರಮಿಸಬೇಕು ಎಂಬ ಮುಕ್ತ ಮನಸ್ಥಿತಿ ನಮ್ಮ ಮುಖ್ಯಮಂತ್ರಿಗಳಿಗಿದೆ ಎಂದು ಸಚಿವರು

> ಪ್ರತಿಯೊಂದು ಹಳ್ಳಿಗಳಲ್ಲಿ ಯುವಕರ ಕ್ಲಬ್‌ಗಳನ್ನು ಕಟ್ಟಿ, ಗ್ರಾಮೀಣ ಭಾಗದ ಕಲೆ, ಸಂಸ್ಕೃತಿ ಮತ್ತು ಕ್ರೀಡೆಗಳನ್ನು ಉಳಿಸಿ ಬೆಳೆಸಲು 10 ಲಕ್ಷದವರೆಗೆ ಪ್ರೋತ್ಸಾಹ ನೀಡುವ ಪ್ರಮುಖ ಯೋಜನೆಗೆ ಸಂಪುಟದಲ್ಲಿ ಅನುಮೋದನೆ ದೊರೆತಿದೆ ಎಂದರು. –ಸಚಿವ ಯು.ಟಿ. ಖಾದರ್

ತನಿಖೆಯಲ್ಲಿ ಅವರು ಆರೋಪಗಳಿಂದ ಮುಕ್ತವಾದ ಬಳಿಕ, ಕ್ಲೀನ್ ಚಿಟ್ ಪಡೆದು ಅವರು ಖಂಡಿತವಾಗಿಯೂ ಮರಳಿ ಅಧಿಕಾರಕ್ಕೆ ಬರುತ್ತಾರೆ ಎಂದು ತಿಳಿಸಿದರು.

ಸರ್ಕಾರದ ನೂರು ದಿನಗಳ ಕಾರ್ಯವೈಖರಿ ಹಾಗೂ ಸಂಪುಟದ ಮಹತ್ವದ ನಿರ್ಣಯಗಳ ಬಗ್ಗೆ ಮಾತನಾಡಿದ ಯು.ಟಿ. ಖಾದರ್, ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ನೇತೃತ್ವದ ನೂತನ ಸರ್ಕಾರ ಸಂಭ್ರಮಾಚರಣೆಗಿಂತ ಹೆಚ್ಚಾಗಿ ಜನರ ಕೆಲಸಗಳಿಗೆ ಮೊದಲ ಆದ್ಯತೆ ನೀಡಿದೆ ಎಂದರು.

# ಸುರಪೂರದಲ್ಲಿ ಪ್ರಜಾ ಸೇವೆ ಸಭೆ ಯಶಸ್ವಿ 259 ಅರ್ಜಿಗಳ ನೋಂದಣಿ, ವಿಲೇವಾರಿಗೆ ಸೂಚನೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಯಾದಗಿರಿ:**

ಜಿಲ್ಲೆಯ ಸುರಪುರದಲ್ಲಿ ಇಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಹಾಗೂ ಶಾಸಕ ರಾಜಾ ವೇಣುಗೋಪಾಲ್ ನಾಯಕ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪ್ರಜಾ ಸೇವೆ ಸಭೆ ಯಶಸ್ವಿಯಾಗಿದ್ದು, ವಿವಿಧ ಇಲಾಖೆಯ ಸುಮಾರು 259 ಅರ್ಜಿ ಸಲ್ಲಿಕೆಯಾಗಿವೆ. ಈ ಪೈಕಿ 19 ಅರ್ಜಿಗಳ ವಿಲೇವಾರಿ ಮಾಡಲಾಗಿದ್ದು,240 ಅರ್ಜಿ ಮೇಲೆ ಕ್ರಮ ಕೈಗೊಳ್ಳಲಾಗುತ್ತಿದೆ.

ಪ್ರಜಾ ಸೇವೆ ಸಭೆಗೆ ದೂರು, ದುಮ್ಮಾನು ಹೊತ್ತಿಕೊಂಡು ಬಂದ ನೂರಾರು ಸಾರ್ವಜನಿಕರ ಸಮಸ್ಯೆಯನ್ನು ಸಚಿವ ಡಾ.ಶರಣಪ್ರಕಾಶ ಪಾಟೀಲ್ ಮತ್ತು

### ಕಂದಾಯಕ್ಕೆ ಸಂಬಂಧಿಸಿದ 65 ಅರ್ಜಿ ಸಲ್ಲಿಕೆ

**ಪ್ರಜಾ ಸೇವೆ ಸಭೆಯಲ್ಲಿ ಸ್ವೀಕೃತ 259 ಅರ್ಜಿ ಪೈಕಿ, ಕಂದಾಯ ಇಲಾಖೆ - 65 ಅರ್ಜಿ ಸಲ್ಲಿಕೆಯಾಗಿವೆ. ಉಳಿದಂತೆ ವಸತಿ-34 ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್-53 ಆಹಾರ-13, ನಗರಾಭಿವೃದ್ಧಿ ಇಲಾಖೆ- 23, ಇಂಧನ-7 , ಪಂಚಾಯತ್ ರಾಜ್ ಇಂಜಿನಿಯರಿಂಗ್-31, ಕೃಷಿ-3, ಮಹಿಳಾ ಮತ್ತು ಮಕ್ಕಳ ಕಲ್ಯಾಣ-13, ಜಲಸಂಪನ್ಮೂಲ -5, ಸಾರಿಗೆ-5, ನಗರಾಭಿವೃದ್ಧಿ-23, ಸಮಾಜ ಕಲ್ಯಾಣ-4, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ-6 ಸಲ್ಲಿಕೆಯಾಗಿವೆ. ಹೀಗೆ ಇನ್ನಿತರ ಇಲಾಖೆಗಳು ಒಳಗೊಂಡಂತೆ ಒಟ್ಟು 259 ಅರ್ಜಿ ಸ್ವೀಕರಿಸಲ್ಪಟ್ಟಿವೆ.**

ಸ್ಥಳೀಯ ಶಾಸಕ ರಾಜಾ ವೇಣುಗೋಪಾಲ್ ನಾಯಕ್ ಆಲಿಸಿದರು. ಮಹಿಳೆಯರು, ವೃದ್ಧರು, ರೈತರು, ಹೀಗೆ ಸರ್ವರ ಸಮಸ್ಯೆಗಳನ್ನು ಆಲಿಸಿದರು.

ಇಂದಿನ ಸಭೆಯಲ್ಲಿ ಸ್ವೀಕೃತ ಎಲ್ಲಾ ಅರ್ಜಿಗಳನ್ನು ಪ್ರಥಮಾದ್ಯತೆ ಮೇಲೆ ವಿಲೇವಾರಿ ಮಾಡುವಂತೆ ಸಭೆಯಲ್ಲಿದ್ದ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ ಸಚಿವರು, ಸರ್ಕಾರದ ಆದೇಶದಂತೆ ಪ್ರತಿ ಈ ಅರ್ಜಿಗಳನ್ನು ತಹಶೀಲ್ದಾರರ, ಎ.ಸಿ, ಡಿ.ಸಿ. ಹಂತದಲ್ಲಿ ಪರಿಶೀಲಿಸಿ ವಿಲೇವಾರಿ ಮಾಡುವಂತೆ ನಿರ್ದೇಶನ ನೀಡಿದರು.

# ಮೂರು ದಿನದಲ್ಲಿ ಘೋಷಣೆ ಮಾಡದಿದ್ದರೆ ರಾಷ್ಟ್ರೀಯ ಹೆದ್ದಾರಿ ಬಂದ್ ಎಚ್ಚರಿಕೆ

• **ಉದಯವಾಹಿನಿ ಬಾದಾಮಿ:**

ಬಾಗಲಕೋಟೆ ಜಿಲ್ಲೆಯ ರೈತರು ಮುಂಗಾರು ಮಳೆ ಕೈಕೊಟ್ಟ ಪರಿಣಾಮ ಬಿತ್ತನೆಗೆ ಪ್ರತಿ ಎಕರೆಗೆ 30 ರಿಂದ 40 ಸಾವಿರ ವರೆಗೆ ಹಣ ಖರ್ಚು ಮಾಡಿದ್ದು ಬಿತ್ತಿದ ಬೀಜ ಮೊಳಕೆಯೊಡೆಯದೇ ಬರದ ತೀವ್ರ ಸಂಕಷ್ಟ ಎದುರಿಸುತ್ತಿದ್ದು ಸರ್ಕಾರ ಕೂಡಲೇ ಜಿಲ್ಲೆಯನ್ನು ಸಂಪೂರ್ಣ ಬರಗಾಲ ಜಿಲ್ಲೆ ಎಂದು ಶೀಘ್ರದಲ್ಲಿ ಘೋಷಿಸಿ, ಪ್ರತಿ ಎಕರೆಗೆ 50 ಸಾವಿರ ಪರಿಹಾರ ನೀಡಬೇಕು ಎಂದು ಭಾರತೀಯ ಕಿಸಾನ್ ಸಂಘದ ಜಿಲ್ಲಾಧ್ಯಕ್ಷ ವಿರುಪಾಕ್ಷಯ್ಯ ಹಿರೇಮಠ ಆಗ್ರಹ ಪಡಿಸಿದರು.

ಅವರು ಭಾರತೀಯ ಕಿಸಾನ ಸಂಘ ಕರ್ನಾಟಕ ಪ್ರದೇಶ ಉತ್ತರ ಪ್ರಾಂತ ಬಾಗಲಕೋಟೆ ಜಿಲ್ಲಾ ಬಾದಾಮಿ ತಾಲ್ಲೂಕು ಘಟಕ ಹಾಗೂ ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ಜರುಗಿದ ಜಿಲ್ಲೆಯ ಬಾದಾಮಿ ಸೇರಿದಂತೆ ಎಲ್ಲಾ ತಾಲ್ಲೂಕುಗಳನ್ನು ಬರ ಪೀಡಿತ ಘೋಷಿಸಿಸಲು ಆಗ್ರಹಿಸಿ ರೈತರು ಬಾದಾಮಿ ಪಟ್ಟಣದ ರಾಮದುರ್ಗ ವೃತ್ತದ ಬಳಿ ಎರಡು ಗಂಟೆಗಳ ಕಾಲ ವಾಹನ ಸಂಚಾರ


ಉದಯವಾಹಿನಿ ಚಿತ್ರ

ತಡೆದು ಬೃಹತ್ ಪ್ರತಿಭಟನೆ ನಡೆಸಿದ ಸಂಧರ್ಭದಲ್ಲಿ ಪ್ರತಿಭಟನಾ ನಿರತ ರೈತರನ್ನುದ್ದೇಶಿಸಿ ಮಾತನಾಡಿ ಇಲ್ಲದಿದ್ದರೆ ಬರಗಾಲ ಜಿಲ್ಲೆ ಎಂದು ಘೋಷಣೆ ಮಾಡದಿದ್ದರೆ ಎಲ್ಲಾ ರೈತ ಸಂಘಟನೆಗಳ ಸಹಯೋಗದೊಂದಿಗೆ ರಾಷ್ಟ್ರೀಯ ಹೆದ್ದಾರಿ ಹುಬ್ಬಳ್ಳಿ ವಿಜಯಪುರ ರಸ್ತೆಯನ್ನು ಕುಳಗೇರಿ ಕ್ರಾಸ್ ಬಳಿ ತಡೆದು ಉಗ್ರ ಹೋರಾಟ ನಡೆಸಲಾಗುವುದು ಎಂದು ಹಿರೇಮಠ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು. ಕಂದಾಯ ಇಲಾಖೆಯ ಅಧಿಕಾರಿಗೆ ಮನವಿ ಸಲ್ಲಿಸಿದ ನೂರಾರು ರೈತರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಮಳೆ ಕೊರತೆ ಹಾಗೂ ಬೆಳೆ ನಷ್ಟದಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಕೂಡಲೇ ಬಾಗಲಕೋಟೆ ಜಿಲ್ಲೆಯನ್ನು ಸಂಪೂರ್ಣ ಬರಗಾಲ ಜಿಲ್ಲೆ ಎಂದು ಘೋಷಿಸಿ ಸೂಕ್ತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿರು.

ಇದೇ ವೇಳೆ ಭಾರತೀಯ ಕಿಸಾನ ಸಂಘ ಹಾಗೂ ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ತಾಲ್ಲೂಕು ಆಡಳಿತ ಸೌಧದ ಮುಂದೆ ರೈತರ ಅನಿರ್ದಿಷ್ಟಾವಧಿ ಧರಣಿ ಮುಂದುವರಿದಿದೆ.ಪ್ರತಿಭಟನೆಯಲ್ಲಿ ಭಾರತೀಯ ಕಿಸಾನ ಸಂಘದ ಉತ್ತರ ಪ್ರಾಂತ ಕಾರ್ಯಕಾರಿಣಿ ಸದಸ್ಯ ಸುಬ್ಬರಾಯಗೌಡ ಪಾಟೀಲ, ಜಿಲ್ಲಾ ಯುವ ಪ್ರಮುಖ ಕಿರಣಕುಮಾರ ಕುಲಕರ್ಣಿ, ಬಾದಾಮಿ ತಾಲ್ಲೂಕು ಅಧ್ಯಕ್ಷ ರುದ್ರಗೌಡ ಪಾಟೀಲ, ತಾಲ್ಲೂಕು ರೈತ ಸಂಘದ ಅಧ್ಯಕ್ಷ ಸಿದ್ದನಗೌಡ ಗೌಡರ, ಬಿ. ಅಯ್. ಬಡಿಗೇರ, ಎಂ.ಎಚ್. ಕುಮ್ಮಿ, ಬಿ.ಕೆ. ಹುಣಸಿಕಟ್ಟಿ, ಬಾಬು ಜಾಲಿಹಾಳ, ನಿಂಗನಗೌಡ ಹಿರೇನಿಂಗನಗೌಡರ, ಶೇಖರಯ್ಯ ರೇಷ್ಮೆ, ಸಿದ್ದಪ್ಪ ಖವಾಸ್ತೆ, ಸುಭಾಸ ಅಂಗಡಿ, ದಶರಥಗೌಡ ಗದ್ದಿಗೌಡರ ಸೇರಿದಂತೆ ರೈತರು ಹಾಗೂ ಮುಖಂಡರು ಉಪಸ್ಥಿತರಿದ್ದರು.

# ಹಣ ಹೊಡೆದ ಕಾಂಗ್ರೆಸ್ ಕಳ್ಳರು: ಜನಾರ್ದನ ರೆಡ್ಡಿ

• **ಉದಯವಾಹಿನಿ ಗಂಗಾವತಿ,:**

ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ಲೂಟಿ ಮಾಡಿದ ಕಾಂಗ್ರೆಸ್ಸವರು ಕಳ್ಳರು. ಅದರ ಲೆಕ್ಕ ಕೇಳಿದರೆ, ಉತ್ತರ ಕೊಡಿ ಅಂದರೆ ಹುಚ್ಚರ ರೀತಿ ಮಾತನಾಡುತ್ತಾರೆ ಎಂದು ಮಾಜಿ ಸಚಿವ ಜನಾರ್ದನ ರೆಡ್ಡಿ ಅವರು ಲೇವಡಿ ಮಾಡಿದರು. ಇಂದಿಲ್ಲಿ 5ನೇ ದಿನದ ಬಳ್ಳಾರಿ ಚಲೋ ಪಾದಯಾತ್ರೆ ಅಂಗವಾಗಿ ಮಾತನಾಡಿದ ಅವರು, ವಾಲ್ಮೀಕಿ ನಿಗಮದ ಹಣವನ್ನು ಗೋವಾ ಮತ್ತು ತೆಲಂಗಾಣದಲ್ಲಿ ನಡೆದ ಚುನಾವಣೆಗೆ ಬಳಸಿದರು. ದುಡ್ಡು ಹೊಡೆದ ತಪ್ಪಿಗೆ ಇಡೀ ರಾಜ್ಯದ ಜನರ ಎದುರು ತಲೆ ಬಾಗಿಸಿ ದ್ರೋಹ ಮಾಡಿದ್ದೇವೆ ಎಂದು ಕ್ಷಮೆ ಕೇಳಲಿ. ಆಗ ದೇವರು ಇವರನ್ನು ಕ್ಷಮಿಸುತ್ತಾನೆ ಎಂದು ತಿಳಿಸಿದರು. ಸಚಿವ ನಾಗೇಂದ್ರ ರಾಜೀನಾಮೆ ನಂತರವೂ ಬಿಜೆಪಿಯವರು ಯಾಕೆ ಪಾದಯಾತ್ರೆ ಮಾಡುತ್ತಿದ್ದಾರೆ ಎಂದು ಕಾಂಗ್ರೆಸ್ನವರು ಟೀಕೆ ಮಾಡುತ್ತಿದ್ದಾರೆ. ನಮ್ಮ ಪಾದಯಾತ್ರೆ ಕೇವಲ ನಾಗೇಂದ್ರ ರಾಜೀನಾಮೆಗೆ ಸೀಮಿತ ಅಲ್ಲ. ಬದಲಿಗೆ ಸಮಗ್ರ ಕರ್ನಾಟಕದ ಜನರ ಜ್ವಲಂತ ಸಮಸ್ಯೆಗಳ ಬಗ್ಗೆ ರಾಜ್ಯ ಸರ್ಕಾರದ ನಿರ್ಲಕ್ಷ್ಯ ಖಂಡಿಸಿ ಈ ಪಾದಯಾತ್ರೆ ಮಾಡುತ್ತಿದ್ದೇವೆ.


ಉದಯವಾಹಿನಿ ಚಿತ್ರ

> ಜನಾರ್ದನ ರೆಡ್ಡಿ ಕರೆದುಕೊಂಡು ಪಾದಯಾತ್ರೆ ಮಾಡಿ ರಾಜ್ಯದ ಜನರಿಗೆ ಯಾವ ಸಂದೇಶ ಕೊಡ್ತಾ ಇದ್ದಾರೆ ಎಂದು ಸಚಿವ ತಂಗಡಗಿ ಮಾಧ್ಯಮಗಳಲ್ಲಿ ಹೇಳ್ತಾ ಇದ್ದಾನೆ. 'ತಮ್ಮ ತಂಗಡಗಿ ಮೊದಲ ಬಾರಿಗೆ ಶಾಸಕನಾಗಿ ಗೆದ್ದಿದ್ದು ಜನಾರ್ದನ ರೆಡ್ಡಿ ಹಣದಿಂದ ಹಾಗೂ ಮಂತ್ರಿಯಾಗಿದ್ದು ನನ್ನ ಆಶೀರ್ವಾದದಿಂದ. ಈಗ ನಿನಗೆ ಕೊಬ್ಬು ಜಾಸ್ತಿಯಾಗಿದೆ' ಎಂದರು.

ವಾಲ್ಮೀಕಿ ಸಮುದಾಯದ ಯುವಕನ ಕಾಲಿನ ದೂಳಿಗೂ ನಾಗೇಂದ್ರ ಸಮ ಅಲ್ಲ ಎಂದರು. ವಾಲ್ಮೀಕಿ ನಿಗಮದ ಹಣ ತಿಂದ ನಾಗೇಂದ್ರ, ದಲಿತ ಸಮುದಾಯದ ವಿದ್ಯಾರ್ಥಿಗಳು, ಮಹಿಳೆಯರು, ರೈತರಿಗೆ ದ್ರೋಹ ಮಾಡಿದ್ದಾನೆ. ಈಗ ನಾವು ಪ್ರಶ್ನೆ ಮಾಡಿದರೆ ಬಿಜೆಪಿಯವರು ದಲಿತ ವಿರೋಧಿ ಅಂತಾನೆ ಎಂದರು.

# ಏಷ್ಯಾದ ಮೊಟ್ಟಮೊದಲ ಭೂಗರ್ಭ ವಿದ್ಯುದಾಗರ, ರಾಜ್ಯದ ತಂತ್ರಜ್ಞರ ಹೆಗ್ಗಳಿಕೆ

• **ಉದಯವಾಹಿನಿ ಶಿವಮೊಗ್ಗ:**

ಜಲ ವಿದ್ಯುತ್ ಉತ್ಪಾದನೆಗೆ ಬೇಕಾಗುವ ಒತ್ತಡ ಸಾಕಾಗುವುದಿಲ್ಲ ಎಂದು ಏಷ್ಯಾದಲ್ಲೆ ಮೊಟ್ಟ ಮೊದಲ ಬಾರಿಗೆ ಭೂಮಿಯೊಳಗೆ ಸುರಂಗ ಕೊರೆದು ವಿದ್ಯುತ್ ಉತ್ಪಾದನಾ ಘಟಕ ಸ್ಥಾಪಿಸಿದ ಹೆಗ್ಗಳಿಕೆ ರಾಜ್ಯದ ತಂತ್ರಜ್ಞರಿಗೆ ಸಲ್ಲುತ್ತದೆ. ಮಾಣಿ ಮತ್ತು ಪಿಕ್‌ಅಪ್ ಜಲಾಶಯದ ನೀರು ಬಳಸಿ ಕಣಿವೆಯಲ್ಲಿ ವಿದ್ಯುತ್ ಉತ್ಪಾದಿಸುವ ಯೋಜನೆ ರೂಪಿಸಲಾಯಿತಾದರೂ ಟರ್ಬೈನ್‌ಗಳಿಗೆ ಹೆಚ್ಚಿನ ಒತ್ತಡ ಸಿಗುವುದಿಲ್ಲ, ನಿರೀಕ್ಷಿತ ವಿದ್ಯುತ್ ಉತ್ಪಾದನೆ ಸಾಧ್ಯವಾಗುವುದಿಲ್ಲ ಎನ್ನುವುದನ್ನು ತಂತ್ರಜ್ಞರು ಗುರುತಿಸಿದರು. ಹೀಗಾಗಿ ಭೂಮಿ ಮೇಲ್ಭಾಗದ ಬದಲಾಗಿ ಕುಂದಾಪುರ ತಾಲ್ಲೂಕು ಹೊಸಂಗಡಿ ಬಳಿ ನೆಲಮಟ್ಟದಿಂದ ಸುಮಾರು 78 ಮೀ. ಕೆಳಗೆ 155 ಮೀ. ಉದ್ದ, 20 ಮೀ. ಅಗಲ, 30 ಮೀ. ಎತ್ತರ ಇರುವ ಸುಮಾರು 93,000 ಘನ ಮೀಟರ್ ಗುಹೆ ಕೊರೆದು ಅದರೊಳಗೆ ಟರ್ಬೈನ್‌ಗಳನ್ನು ಅಳವಡಿಸಲಾಗಿದೆ.

# ಉಡುಪಿ ರಥಬೀದಿಯಲ್ಲಿ ವೈಭವದ ಶ್ರೀಕೃಷ್ಣಲೀಲೋತ್ಸವ

• **ಉದಯವಾಹಿನಿ ಉಡುಪಿ:**


ಉದಯವಾಹಿನಿ ಚಿತ್ರ

ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ನಡೆದ ಎರಡು ದಿನಗಳ ಶ್ರೀಕೃಷ್ಣ ಅವತಾರ ಸಂಭ್ರಮವು ಶ್ರೀಕೃಷ್ಣಲೀಲೋತ್ಸವ(ವಿಟ್ಲಪಿಂಡಿ) ದೊಂದಿಗೆ ಸಮಾಪನಗೊಂಡಿತು.

ಮಹಾವಿಷ್ಣುವಿನ ಎಂಟನೇ ಅವತಾರವಾಗಿ ವಸುದೇವ-ದೇವಕಿಯರ ಗರ್ಭದಲ್ಲಿ ಜನಿಸಿದ ಶ್ರೀಕೃಷ್ಣ ದ್ವಾರಕೆಯಿಂದ ಉಡುಪಿಗೆ ಬಂದು ದ್ವೈತ ಮತ ಸ್ಥಾಪಕ ಶ್ರೀಮಧ್ವರ ಭಕ್ತಿಗೆ ಒಲಿದು ಏಳು ಶತಮಾನಗಳ ಹಿಂದೆ ನೆಲೆಯಾಗಿದ್ದಾನೆ.

ಮಹಾವಿಷ್ಣು ಯೋಗನಿದ್ರೆಯಲ್ಲಿರುವ ಹಿನ್ನೆಲೆಯಲ್ಲಿ ಶ್ರೀಕೃಷ್ಣನ ಉತ್ಸವ ಮೂರ್ತಿಯನ್ನು ಭಾಗೀರಥಿ ಜಯಂತಿ ದಿನ ಒಳಗಿಟ್ಟು ಉತ್ಥಾನ ದ್ವಾದಶಿಗಷ್ಟೇ ಹೊರತೆಗೆಯಲಾಗುತ್ತಿದೆ. ಶ್ರೀಕೃಷ್ಣ ಜನ್ಮಾಷ್ಟಮಿ ಉತ್ಸವಕ್ಕೆ ಶ್ರೀಕೃಷ್ಣನ ಮೃಣ್ಮಯ ಮೂರ್ತಿ ಬಳಸಲಾಗುತ್ತಿದೆ. ಶ್ರೀಕೃಷ್ಣ ಜನ್ಮಾಷ್ಟಮಿ ಉಡುಪಿಯ ಪ್ರಮುಖ ಹಬ್ಬ. ಶ್ರೀಕೃಷ್ಣ ಮಠದಲ್ಲಿ ಪೂಜೆ ಬಳಿಕ ಮೃಣ್ಮಯ ಮೂರ್ತಿಯನ್ನು ತಂದು ಸ್ವರ್ಣ ರಥದಲ್ಲಿಟ್ಟು ಪೂಜೆ, ನೈವೇದ್ಯ ಬಳಿಕ ಶ್ರೀಕೃಷ್ಣ ಲೀಲೋತ್ಸವ ಆರಂಭವಾಯಿತು. ರಥಬೀದಿಯ ತೆಂಕು ಭಾಗದ ವೇದಿಕೆಯಲ್ಲಿ ಪರ್ಯಾಯ ಶಿರೂರು ಶ್ರೀವೇದವರ್ಧನ ತೀರ್ಥ ಶ್ರೀಪಾದರು ಹಾಗೂ ಕೃಷ್ಣಾಪುರ ಮಠದ ಶ್ರೀವಿದ್ಯಾಸಾಗರತೀರ್ಥ ಶ್ರೀಪಾದರು ಭಕ್ತರಿಗೆ ಪ್ರಸಾದ ವಿತರಿಸಿದರು. 13 ಗುರ್ಜಿ,ಎರಡು ಮಂಟಪ ಗುರ್ಜಿಗಳಲ್ಲಿ ಮೊಸರು, ಅರಳು, ಬಣ್ಣದ ನೀರ ಕುಡಿಕೆಯನ್ನು ಗೊಲ್ಲವೇಷಧಾರಿಗಳು ಒಡೆದು ಸಂಭ್ರಮಿಸಿದರು. ರಥಬೀದಿಯಲ್ಲಿ ಹುಲಿ ತಂಡಗಳ ಅಬ್ಬರ, ಮಹಿಷ ಸಹಿತ ನಾನಾ ಅಸುರ ವೇಷಗಳು ರಥಬೀದಿಯಲ್ಲಿ ಓಡಾಡಿ ಜನರ ಕಣ್ಮನ ಸೆಳೆದವು. ಶ್ರೀಕೃಷ್ಣನಿಗೆ ಅರ್ಘ್ಯ ಪ್ರದಾನ ಸಂದರ್ಭ ಪರ್ಯಾಯ ಯತಿಗಳು ನವ ಬಗೆಯ ಉಂಡೆ ಸಹಿತ ನಿತ್ಯ ನೈವೇದ್ಯವನ್ನು ಸಮರ್ಪಿಸಿದರು. ಭಕ್ತರಿಗೆ 1.50 ಲಕ್ಷ ಚಕ್ಕುಲಿ ಹಾಗೂ 1.50 ಲಕ್ಷ(ಐದು ಬಗೆ) ಉಂಡೆ ಪ್ಯಾಕೆಟ್‌ಗಳನ್ನು ಶ್ರೀಕೃಷ್ಣನ ಪ್ರಸಾದ ರೂಪದಲ್ಲಿ ವಿತರಿಸಲಾಯಿತು. ಓಕುಳಿಯಾಟದ ಬಳಿಕ ಶ್ರೀ ಕೃಷ್ಣನ ಮೃಣ್ಮಯ ಮೂರ್ತಿಯನ್ನು ಮಧ್ವಸರೋವರದಲ್ಲಿ ವಿಸರ್ಜಿಸಲಾಯಿತು.

# ಸುಬ್ರಹ್ಮಣ್ಯ ಬಳಿ ಕೆಎಸ್‌ಆರ್‌ಟಿಸಿ ಬಸ್‌ಗೆ ಬೆಂಕಿ

• **ಉದಯವಾಹಿನಿ ಸುಬ್ರಹ್ಮಣ್ಯ :**

ಕುಕ್ಕೆ ಸುಬ್ರಹ್ಮಣ್ಯದಿಂದ ಹಾಸನ ಮಾರ್ಗವಾಗಿ ಬೆಂಗಳೂರಿಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ವೊಂದು ಆಕಸ್ಮಿಕವಾಗಿ ಬೆಂಕಿ ಹೊತ್ತಿಕೊಂಡು ಸಂಪೂರ್ಣ ಸುಟ್ಟು ಕರಕಲಾದ ಘಟನೆ ಸುಬ್ರಹ್ಮಣ್ಯ-ಗುಂಡ್ಯ ರಾಜ್ಯ ಹೆದ್ದಾರಿಯ ಎರ್ಮಾಯಿಲ್ ಎಂಬಲ್ಲಿ ಸಂಭವಿಸಿದೆ. ಚಾಲಕನ ಸಮಯಪ್ರಜ್ಞೆಯಿಂದ ಬಸ್‌ನಲ್ಲಿದ್ದ 37 ಪ್ರಯಾಣಿಕರು ಯಾವುದೇ ಅಪಾಯವಿಲ್ಲದೆ ಪಾರಾಗಿದ್ದಾರೆ. ಕುಕ್ಕೆ ಸುಬ್ರಹ್ಮಣ್ಯದಿಂದ ಪ್ರಯಾಣಿಕರನ್ನು ಕರೆದೊಯ್ದಿದ್ದ ಬಿ.ಸಿ.ರೋಡ್ ಡಿಪೋಗೆ ಸೇರಿದ ಸಾರಿಗೆ ಬಸ್‌ನಲ್ಲಿ ಎರ್ಮಾಯಿಲ್ ಸಮೀಪ ಸಂಚರಿಸುತ್ತಿದ್ದ ವೇಳೆ ಏಕಾಏಕಿ ಹೊಗೆ ಕಾಣಿಸಿಕೊಂಡಿದೆ. ಅದನ್ನು ಗಮನಿಸಿದ ಚಾಲಕ ಕೂಡಲೇ ಬಸ್ ನಿಲ್ಲಿಸಿ ಪ್ರಯಾಣಿಕರನ್ನು ಎಚ್ಚರಿಸಿದ್ದಾರೆ. ಯಾವುದೇ ಆತಂಕಕ್ಕೆ ಒಳಗಾಗದೆ ಪ್ರಯಾಣಿಕರನ್ನು ತಕ್ಷಣವೇ ಬಸ್‌ನಿಂದ ಕೆಳಗಿಳಿಸುವಲ್ಲಿ ಚಾಲಕ ಯಶಸ್ವಿಯಾಗಿದ್ದಾರೆ. ಪ್ರಯಾಣಿಕರೆಲ್ಲರೂ ಬಸ್‌ನಿಂದ ಸುರಕ್ಷಿತವಾಗಿ ಹೊರಬಂದ ಕೆಲವೇ ಕ್ಷಣಗಳಲ್ಲಿ ಬೆಂಕಿ ತೀವ್ರವಾಗಿ ವ್ಯಾಪಿಸಿದ್ದು, ನೋಡನೋಡುತ್ತಿದ್ದಂತೆ ಬಸ್ ಸಂಪೂರ್ಣವಾಗಿ ಬೆಂಕಿಯ ಕೆನ್ನಾಲಿಗೆಗೆ ಸಿಲುಕಿದೆ. ಬೆಂಕಿಯ ತೀವ್ರತೆ ಹೆಚ್ಚಾಗುತ್ತಿದ್ದಂತೆ ಬಸ್‌ನ ಬಹುತೇಕ ಭಾಗ ಸುಟ್ಟು ಕರಕಲಾಗಿದೆ. ಘಟನೆಯಿಂದಾಗಿ ಸುಬ್ರಹ್ಮಣ್ಯ-ಗುಂಡ್ಯ ರಾಜ್ಯ ಹೆದ್ದಾರಿಯಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ 37 ಮಂದಿ ಪ್ರಯಾಣಿಕರು ಸಕಾಲದಲ್ಲಿ ಕೆಳಗಿಳಿದಿದ್ದರಿಂದ ಯಾವುದೇ ಅಪಾಯ ಸಂಭವಿಸಿಲ್ಲ ಎಂದು ತಿಳಿದುಬಂದಿದೆ. ಬಸ್‌ನ ಇಂಜಿನ್ ಭಾಗದಲ್ಲಿ ತಾಂತ್ರಿಕ ದೋಷದಿಂದ ಬೆಂಕಿ ಕಾಣಿಸಿಕೊಂಡಿತೇ ಅಥವಾ ಬೇರೆ ಯಾವುದೇ ಕಾರಣವಿದೆಯೇ ಎಂಬ ಬಗ್ಗೆ ಪರಿಶೀಲನೆ ನಡೆಯಬೇಕಿದೆ. ನಿಖರ ಕಾರಣ ಹಾಗೂ ಸಂಭವಿಸಿರುವ ನಷ್ಟದ ಕುರಿತು ಅಧಿಕೃತ ತನಿಖೆಯ ಬಳಿಕವೇ ಹೆಚ್ಚಿನ ಮಾಹಿತಿ ಲಭ್ಯವಾಗಬೇಕಿದೆ.

# ದಾವಣಗೆರೆಯಲ್ಲಿ ರಾಜರ ಕಾಲದ ತೂಕ-ಅಳತೆ ಪರಿಕರ ಸಂಗ್ರಹ

## ಏಷ್ಯಾದಲ್ಲೇ ಅಪರೂಪದ ತುಲಾಭವನ ನಿರ್ಮಾತೃಗೆ ಆಕ್ಸ್‌ಫರ್ಡ್‌ನಿಂದ ಬಂತು ಆಹ್ವಾನ!


• **ಉದಯವಾಹಿನಿ ದಾವಣಗೆರೆ:**

ದೂರದ ಇಂಗ್ಲೆಂಡ್ ದೇಶವೆಲ್ಲಿ, ಭಾರತದ ಪುಟ್ಟ ಜಿಲ್ಲೆ ಬೆಣ್ಣೆನಗರಿ ದಾವಣಗೆರೆ ಎಲ್ಲಿ. ಆದ್ರೆ 1947 ರಲ್ಲಿ ನಮ್ಮ ದೇಶವನ್ನು ಬಿಟ್ಟು ತೊಲಗಿದ್ದ ಆಂಗ್ಲರು ಇದೀಗ ಏಷ್ಯಾದಲ್ಲೇ ಏಕೈಕ ತೂಕ ಅಳತೆಯ ಅಪರೂಪದ ಮ್ಯೂಸಿಯಂನ್ನು ಹುಡುಕಿಕೊಂಡು ಇಲ್ಲಿಗೆ ಆಗಮಿಸಿದ್ದರು. ಅಲ್ಲದೆ ಆಕ್ಸ್‌ಫರ್ಡ್ ವಿವಿಗೆ ಆಗಮಿಸುವಂತೆ ಮ್ಯೂಸಿಯಂ ನಿರ್ಮಾತೃ ಬಸವರಾಜ್ ಯಳಮಲ್ಲಿ ಅವರಿಗೆ ಹಿಸ್ಟರಿ

1 : ದೇಶದ ಮೊದಲ ಮ್ಯೂಸಿಯಂ
2 : ಅಳತೆ ತೂಕದ ಪರಿಕರಗಳಿವು
3 : ಬಳಕೆ ಮಾಡ್ತಿದ್ದ ತಕ್ಕಡಿಗಳು

ಆಫ್ ಸೈನ್ಸ್ ಮ್ಯೂಸಿಯಂ ವಿಭಾಗದಿಂದ ಆಹ್ವಾನ ನೀಡಿದ್ದಾರೆ. ನಗರದ ಚಾಮರಾಜಪೇಟೆಯಲ್ಲಿರುವ ಈ ತುಲಾ ಭವನದಲ್ಲಿ ರಾಜರ ಕಾಲದ ಹಾಗೂ ವಸಾಹತು ಕಾಲದ ತೂಕ ಮತ್ತು ಅಳತೆಯ ಮ್ಯೂಸಿಯಂ ಮೇಲೆ ಆಂಗ್ಲರ ದೃಷ್ಟಿ ನೆಟ್ಟಿರುವುದು ವಿಶೇಷ.

**ಆಂಗ್ಲರ ನಾಡು ಇಂಗ್ಲೆಂಡ್‌ನ ಆಕ್ಸ್‌ಫರ್ಡ್ ವಿವಿಯಿಂದ ಬಂತು ಬುಲಾವ್:** ಸುಮಾರು ಆರು ನೂರು ವರ್ಷಗಳ ಹಿಂದಿನ ರಾಜ ಮಹಾರಾಜರ ಕಾಲದ, ದೇಶ ವಿದೇಶಗಳ ತೂಕ-ಅಳತೆ ಮಾಪನಗಳನ್ನು ಬಸವರಾಜ್ ಯಳಮಲ್ಲಿ ಅವರು 30 ವರ್ಷ


ಉದಯವಾಹಿನಿ ಚಿತ್ರ

ಗಳಿಂದ ಸಂಗ್ರಹಿಸಿದ್ದಾರೆ. ವಿವಿಧ ರಾಜರ ಕಾಲದಲ್ಲಿ ಬಳಸುತ್ತಿದ್ದ ಐದು ಸಾವಿರ ತೂಕ ಅಳತೆ ಮಾದರಿ ಸಂಗ್ರಹ ಮಾಡಿದ್ದಾರೆ.

ಬಸವರಾಜ್ ಅವರು ವೃತ್ತಿಯ ಜೊತೆಗೆ ಪ್ರವೃತ್ತಿಯಾಗಿ ಚಾರಿತ್ರಿಕ ತೂಕ ಹಾಗೂ ಅಳತೆಗಳ ಸಂಗ್ರಹ ಹಾಗೂ ಅಧ್ಯಯನ ಮಾಡಿದ್ದಾರೆ. ಈಗಾಗಲೇ ಈ ತುಲಾಭವನ ಲಿಮ್ಕಾ ಬುಕ್ ಆಫ್ ರೆಕಾರ್ಡ್‌ನಲ್ಲಿ ಸ್ಥಾನ ಗಿಟ್ಟಿಸಿಕೊಂಡಿದೆ. ಇತ್ತೀಚಿಗೆ ಆಕ್ಸ್‌ಫರ್ಡ್ ವಿವಿ ಪ್ರತಿನಿಧಿಗಳು ತುಲಾಭವನ ವೀಕ್ಷಣೆ ಮಾಡಿದ್ದು ನಮ್ಮ ಹೆಮ್ಮೆಯಾಗಿದೆ. ಬಸವರಾಜ್ ಯಳಮಲ್ಲಿ ಅವರನ್ನು ಆಕ್ಸ್‌ಫರ್ಡ್ ವಿವಿಯ ಹಿಸ್ಟರಿ ಆಫ್ ಸೈನ್ಸ್ ಮ್ಯೂಸಿಯಂ ವಿಭಾಗದಿಂದ ಆಹ್ವಾನಿಸಲಾಗಿದ್ದು, ಇದೇ ಸೆಪ್ಟೆಂಬರ್ 12 ರಂದು ಇಂಗ್ಲೆಂಡ್‌ಗೆ ಅವರು ಪ್ರವಾಸ ಬೆಳೆಸಲಿದ್ದಾರೆ.

16 ದಿನಗಳ ಕಾಲ ಆಕ್ಸ್‌ಫರ್ಡ್ ವಿವಿ ಕಾರ್ಯಾಗಾರದಲ್ಲಿ ತೂಕ ಮತ್ತು ಅಳತೆ ಸಾಮಗ್ರಿಗಳ ಬಗ್ಗೆ ನಮ್ಮ ದಾವಣಗೆರೆಯ ಬಸವರಾಜ್ ಯಳಮಲ್ಲಿ ಅವರು ಆಂಗ್ಲರನ್ನುದ್ದೇಶಿಸಿ ಉಪನ್ಯಾಸ ನೀಡಲಿದ್ದಾರೆ. ಯಾವ ರೀತಿ 30 ವರ್ಷಗಳ ಕಾಲ ಈ ಪರಿಕರಗಳನ್ನು ಸಂಗ್ರಹ ಮಾಡಿದ್ದರು, ಅಲ್ಲದೆ ಬ್ರಿಟಿಷರ ತೂಕ ಅಳತೆಯ ಪರಿಕರಗಳೇ ಶ್ರೇಷ್ಠ ಎನ್ನುತ್ತಿರುವ ಆಂಗ್ಲರಿಗೆ ನಮ್ಮ ದೇಶದ ರಾಜರು ಬಳಸುತ್ತಿದ್ದ ತೂಕ ಪರಿಕರಗಳ ಶ್ರೇಷ್ಠತೆ ಬಗ್ಗೆ ವಿಸ್ತೃತವಾಗಿ ಬಸವರಾಜ್ ಅವರು ತಿಳಿ ಹೇಳಲಿದ್ದಾರೆ.

ಬಸವರಾಜ್ ಯಳಮಲ್ಲಿ ಅವರು ದೇಶದಲ್ಲೇ ಮೊದಲನೆಯದು ಎನಿಸಿರುವ ಈ ತೂಕ, ಅಳತೆಯ ವಿವಿಧ ಪರಿಕರಗಳನ್ನು ಸಂಗ್ರಹಿಸಿದ್ದಾರೆ. ಈ ಮ್ಯೂಸಿಯಂಗೆ 'ತುಲಾಭವನ' ಎಂದು ಹೆಸರಿಡಲಾಗಿದ್ದು, ಕ್ರಿಸ್ತಪೂರ್ವ ಹಾಗೂ ಕ್ರಿಸ್ತಶಕ 1600 ರ ವಿವಿಧ ಪರಿಕರಗಳನ್ನು ಸಂಗ್ರಹಿಸಿ ಮ್ಯೂಸಿಯಂನಲ್ಲಿ ಅಚ್ಚುಕಟ್ಟಾಗಿ ಜೋಡಿಸಲಾಗಿದೆ. ಹೆಚ್ಚಿನ ಸಾಧನಗಳ ಕೆಳಗೆ ಅವುಗಳ ಕಾಲ, ಹೆಸರಿನ ಮಾಹಿತಿ ನಮೂದಿಸಲಾಗಿದೆ.

> 2016ರಲ್ಲಿ ನಮ್ಮ ಮ್ಯೂಸಿಯಂ ಲಿಮ್ಕಾ ಬುಕ್ ಆಫ್ ರೆಕಾರ್ಡ್ ಗೆ ಸೇರ್ಪಡೆಯಾಯಿತು. ನಾವು 12ನೇ ಶತಮಾನದಿಂದ ಇಲ್ಲಿ ತನಕ 180 ರಾಜಮನೆತನದವರು ಬಳಕೆ ಮಾಡುತ್ತಿದ್ದ ತೂಕ-ಅಳತೆ ಪರಿಕರಗಳನ್ನು ಸಂಗ್ರಹ ಮಾಡಿದ್ದೇವೆ ಎಂದು ತಿಳಿಸಿದರು. -ಬಸವರಾಜ್ ಯಳಮಲ್ಲಿ

> ದೇಶ, ವಿದೇಶಗಳಲ್ಲಿ ತಯಾರಾದ ರಾಜ ಮನೆತನಗಳಲ್ಲಿದ್ದ ತೂಕ-ಅಳತೆಗಳ ಸಾಧನಗಳೆಲ್ಲವನ್ನೂ ಒಂದೇ ಸೂರಿನಡಿ ಇಲ್ಲಿ ನೋಡಬಹುದು. ಅಪರೂಪದ್ದೆನಿಸಿದ್ದ, 18ನೇ ಶತಮಾನದಲ್ಲಿ ಬಳಸುತ್ತಿದ್ದ ತಕ್ಕಡಿ ಡಬ್ಬಿ ಇಲ್ಲಿದೆ. ಇದನ್ನು ಬೆಳ್ಳಿ, ಬಂಗಾರದ ವಸ್ತುಗಳನ್ನು ತೂಗಲು ಬಳಸಲಾಗುತ್ತಿತ್ತು.

> ಈ ಸಂಗ್ರಹಾಲಯ ನಿರ್ವಹಣೆಗಾಗಿ ನಾಲ್ವರು ನಿರ್ದೇಶಕರನ್ನು ಒಳಗೊಂಡ ಚನ್ನವೀರಪ್ಪ ಯಳಮಲ್ಲಿ ಟ್ರಸ್ಟ್ ಸ್ಥಾಪಿಸಿ, 700 ವರ್ಷಗಳ ಹಳೆಯ ಪರಿಕರಗಳನ್ನು ಸಂಗ್ರಹಿಸಿದ್ದಾರೆ. ಇದೀಗ ಈ ಪರಿಕರಗಳು ಇಂಗ್ಲೆಂಡ್ ದೇಶದ ಗಮನ ಸೆಳೆದಿವೆ. ಅಲ್ಲದೆ ಆಕ್ಸ್‌ಫರ್ಡ್ ವಿಶ್ವವಿದ್ಯಾನಿಲಯದಲ್ಲಿ ವಿಶೇಷ ಉಪನ್ಯಾಸ ನಡೆಯಲಿದೆ.

ತೂಕ ಹಾಗೂ ಅಳತೆ ಮಾಡುವ ಪರಿಕರಗಳನ್ನು ಮಾರಾಟ ಮಾಡುತ್ತಿದ್ದ ಕುಟುಂಬವೊಂದು ಇದೀಗ ಬ್ರಿಟಿಷರ ಕಾಲದಲ್ಲಿ ಬಳಕೆಯಾಗುತ್ತಿದ್ದ ವಿವಿಧ ನಮೂನೆಯ ತೂಕದ ಯಂತ್ರಗಳು, 180ಕ್ಕೂ ಹೆಚ್ಚು ರಾಜ ಸಂಸ್ಥಾನಗಳಲ್ಲಿ ಆಯಾ ಕಾಲದಲ್ಲಿ ಬಳಕೆಯಲ್ಲಿದ್ದ ತೂಕ, ಅಳತೆಯ ಉಪಕರಣಗಳನ್ನು ಸಂಗ್ರಹಿಸಿ ಸುಂದರ ಮ್ಯೂಸಿಯಂ ನಿರ್ಮಿಸಿ ಗಮನ ಸೆಳೆದಿದ್ದಾರೆ.